ಸಂಪುಟ : 10 ಸಂಚಿಕೆ: 308 ಪುಟ : 4+2 ಬೆಲೆ: 3.00 ಶನಿವಾರ ಜನವರಿ 24 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 308 Pages : 4+2 Price : 3.00 Saturday January 24 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಲಕ್ಕುಂಡಿ ಭೂಗರ್ಭದ 8ನೇ ದಿನದ ಉತ್ಖನನದಲ್ಲಿ ಹೊಸ ಸುಳಿವು । ಮರೆತ ಇತಿಹಾಸ ಹೊರಬರುವ ಕ್ಷಣ

# ಜಾಗತಿಕ ಗಮನ ಸೆಳೆಯುತ್ತಿದೆ ಲಕ್ಕುಂಡಿ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತಾಲೂಕಿನ ಐತಿಹಾಸಿಕ ಲಕ್ಕುಂಡಿ ಗ್ರಾಮದಲ್ಲಿ ಉತ್ಖನನ ಕಾರ್ಯ 8ನೇ ದಿನಕ್ಕೆ ಕಾಲಿಟ್ಟಿದೆ. ಬೆಳಿಗ್ಗೆ 8 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಸುಮಾರು 35 ಕಾರ್ಮಿಕರು ಸೂಕ್ಷ್ಮವಾಗಿ ಉತ್ಖನನ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದಾರೆ. ಕೋಟೆ ವೀರಭದ್ರೇಶ್ವರ ದೇವಸ್ಥಾನದ ಆವರಣದಲ್ಲಿ ನಡೆಯುತ್ತಿರುವ ಈ ಕಾರ್ಯ ಇದೀಗ ಭಾರೀ ಕುತೂಹಲಕ್ಕೆ ಕಾರಣವಾಗಿದೆ.

ಈಗಾಗಲೇ ಎಂಟು ಅಡಿ ಆಳದ ನಾಲ್ಕು ಬ್ಲಾಕ್‌ಗಳನ್ನು ತೆಗೆದುಹಾಕಲಾಗಿದ್ದು, ಎಂಟು ಅಡಿ ನಂತರ ನೈಜ ಲಕ್ಕುಂಡಿಯ ದರ್ಶನ ಸಾಧ್ಯತೆ ಇದೆ ಎಂಬ ನಿರೀಕ್ಷೆ ಜನರಲ್ಲಿ ಹೆಚ್ಚಾಗಿದೆ. ರಾಜ-ಮಹಾರಾಜರ ಕಾಲದ ವೈಭವ, ಚಿನ್ನ, ವಜ್ರ, ಹವಳ, ಮುತ್ತು ಸೇರಿದಂತೆ ಅಮೂಲ್ಯ ಪ್ರಾಚ್ಯವಸ್ತುಗಳು ಪತ್ತೆಯಾಗುವ ಸಾಧ್ಯತೆಯನ್ನು ಕೂಡ ತಜ್ಞರು ವ್ಯಕ್ತಪಡಿಸಿದ್ದಾರೆ.

**ಸರ್ಕಾರದಿಂದ ನಿವೇಶನ ಮಂಜೂರು**

ಲಕ್ಕುಂಡಿಯಲ್ಲಿ ಮನೆ ನಿರ್ಮಾಣದ ಕಾಮಗಾರಿ ವೇಳೆ ಭೂಮಿಯಲ್ಲಿ ಸಿಕ್ಕ ಚಿನ್ನಾಭರಣವನ್ನು ಪ್ರಾಮಾಣಿಕವಾಗಿ ಸರ್ಕಾರಕ್ಕೆ ಸಲ್ಲಿಸಿದ ಪ್ರಜ್ವಲ್ ಕುಟುಂಬದ ಪ್ರಾಮಾಣಿಕತೆಗೆ ಗೌರವ ಸೂಚಿಸುವಂತೆ ಸರ್ಕಾರದಿಂದ 1,133 ಚದರ ಅಡಿ ನಿವೇಶನ ಭೂಮಿಯನ್ನು ಮಂಜೂರು ಮಾಡಲಾಗಿದೆ. ಜೊತೆಗೆ, ಕುಟುಂಬ ಅಪೇಕ್ಷಿಸಿರುವಂತೆ ಮನೆ ನಿರ್ಮಾಣಕ್ಕೆ ಸಹಾಯ ನೀಡಬೇಕೆಂಬ ಒತ್ತಾಯವೂ ಮುಂದುವರೆದಿದೆ. ಈ ವಿಷಯ ಸ್ಥಳೀಯ ಗ್ರಾಮ ಸಭೆಯಲ್ಲಿ ಚರ್ಚೆಯಾಗಿದ್ದು, ಪ್ರಜ್ವಲ್‌ರ ಪ್ರಾಮಾಣಿಕತೆಯನ್ನು ಮೆಚ್ಚಿ ಉಚಿತ ಶಿಕ್ಷಣ ಸಹಾಯ ಒದಗಿಸುವಂತೆ ಶಿಫಾರಸು ಮಾಡಲಾಗಿದೆ.

ಉತ್ಖನನ ಸ್ಥಳದಲ್ಲಿ ಈಗಾಗಲೇ ಮಣ್ಣಿನ ಬಿಲ್ಲೆ, ಮೂಳೆ, ಲೋಹದ ವಸ್ತುಗಳು ಪತ್ತೆಯಾಗಿವೆ. ದಾನ ಚಿಂತಾಮಣಿ ಅತ್ತಿಮಬ್ಬೆಯ ಕರ್ಮಭೂಮಿಯಾದ ಲಕ್ಕುಂಡಿ 101 ದೇವಸ್ಥಾನ, 101 ಬಾವಿಗಳ ಇತಿಹಾಸ ಹೊತ್ತ ಊರು ಇಂದು ಮತ್ತೆ ಜಾಗತಿಕ ಗಮನ ಸೆಳೆಯುತ್ತಿದೆ.

ಜನವರಿ 10ರಂದು ಇಲ್ಲಿ ಪತ್ತೆಯಾದ 470 ಗ್ರಾಂ ಚಿನ್ನದ ನಿಧಿ ದೇಶ-ವಿದೇಶದ ಗಮನ ಸೆಳೆದಿತ್ತು. ಫ್ರಾನ್ಸ್‌ನ ಪ್ರವಾಸಿಗರ ತಂಡವೂ ಸ್ಥಳಕ್ಕೆ ಭೇಟಿ ನೀಡಿ ವೀಕ್ಷಣೆ ನಡೆಸಿದ್ದು, ನಿಧಿಯನ್ನು ಸರ್ಕಾರಕ್ಕೆ ಒಪ್ಪಿಸಿದ ಪ್ರಜ್ವಲ್ ರಿತ್ತಿಯ ಪ್ರಾಮಾಣಿಕತೆಯನ್ನು



ಮೆಚ್ಚಿಕೊಂಡಿದ್ದಾರೆ.

ಆದರೆ ಇದೇ ಲಕ್ಕುಂಡಿಯ ಇತಿಹಾಸದ ಹಿಂದೆ ಒಂದು ನೋವಿನ ಕಥೆಯೂ ಇದೆ. 2003ರಲ್ಲಿ ಅಲ್ಲಮಪ್ರಭು ಮಠದ ಸಮೀಪ ನಡೆದ ಉತ್ಖನನಕ್ಕಾಗಿ



ರೈತ ಶರಣಪ್ಪ ಕಮತರ ಕುಟುಂಬ 3 ಎಕರೆ 33 ಗುಂಟೆ ಜಮೀನನ್ನು ನೀಡಿತ್ತು. ಅಂದಿನ ಶಾಸಕರು ಮತ್ತು ನಾಯಕರು ನೀಡಿದ ಭರವಸೆಯ ಮೇಲೆ ಕುಟುಂಬ ಒಪ್ಪಿಗೆ ನೀಡಿತ್ತು. ಆದರೆ ಉತ್ಖನನ ▶▶3ನೇ ಪುಟಕ್ಕೆ

## ಉಚಿತ ತರಬೇತಿ ಶಿಬಿರ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಕೃಷಿಕರ ಸಂಪನ್ಮೂಲ ಕೇಂದ್ರ, ಬಾಗಲಕೋಟಿ ಇವರು " ಆಡು ಮತ್ತು ಕುರಿ ಸಾಕಾಣಿಕೆ, ಕೋಳಿ ಸಾಕಾಣಿಕೆ, ಹೈನುಗಾರಿಕೆ, ಹಣ್ಣು ಬೆಳೆಗಳ ಕೃಷಿ, ಸಾವಯವ ಕೃಷಿ, ಸಮಗ್ರ ಕೃಷಿ , ಅಣಬೆ ಕೃಷಿ, ಜೇನು ಕೃಷಿ, ರೇಷ್ಮೆ ಕೃಷಿ, ಮತ್ತು ಪುಷ್ಪ - ತರಕಾರಿ ಬೆಳೆಗಳ ಕೃಷಿ ತರಬೇತಿಯನ್ನು ಶಿಬಿರವನ್ನು ಉಚಿತವಾಗಿ ಬಾಗಲಕೋಟೆಯಲ್ಲಿ 2026ರ ಫೆಬ್ರವರಿ ತಿಂಗಳಲ್ಲಿ ಏರ್ಪಡಿಸಿದ್ದಾರೆ. ಶಿಬಿರದಲ್ಲಿ ಅಧಿಕ ಆದಾಯಕ್ಕಾಗಿ ಅನುಸರಿಸಬೇಕಾದ ಆಧುನಿಕ ಪದ್ಧತಿಗಳು, ಹಣಕಾಸಿನ ನಿರ್ವಹಣೆ ಇತ್ಯಾದಿ ವಿಷಯಗಳ ಬಗ್ಗೆ ತರಬೇತಿ ನೀಡಲಾಗುವುದು.

ತರಬೇತಿಯಲ್ಲಿ ಭಾಗವಹಿಸಲು ಆಸಕ್ತಿಯುಳ್ಳ 18 ರಿಂದ 55 ವರ್ಷದೊಳಗಿನ ರೈತರು ಸ್ವ- ಸಹಾಯ ಸಂಘದ ಸದಸ್ಯರು, ಯುವಕರು, ಮಹಿಳೆಯರು ಈ ಮೊಬೈಲ್ ನಂ. 94826 30790 ಗೆ ಕರೆ ಮಾಡಿ ತಮ್ಮ ಹೆಸರನ್ನು ನೋಂದಾಯಿಸಲು ಕೇಂದ್ರದ ಕಾರ್ಯನಿರ್ವಾಹಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ತರಬೇತಿ ಕೇಂದ್ರದ ವಿಳಾಸ : ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಕೃಷಿಕರ ಸಂಪನ್ಮೂಲ ಕೇಂದ್ರ ಯುನಿಟ್ -2, ಸೆಕ್ಟರ ನಂ.96, ಅಡ್ಡರಸ್ತೆ 3, ಪಬ್ಲಿಕ್ ಗಾರ್ಡನ್ ಹತ್ತಿರ, ದುರ್ಗಾ ನಗರ, ನವನಗರ- ಬಾಗಲಕೋಟಿ- 587103 ಸಂಪರ್ಕಿಸಬಹುದಾಗಿದೆ.

ಗಣರಾಜ್ಯೋತ್ಸವ ಪೂರ್ವಸಿದ್ಧತಾ ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

# ಸಮಿತಿಯವರು ಸಮರ್ಪಕವಾಗಿ ತಮ್ಮ ಜವಾಬ್ದಾರಿ ನಿರ್ವಹಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಗಣರಾಜ್ಯೋತ್ಸವ ದಿನಾಚರಣೆಯನ್ನು ಜನವರಿ 26ರಂದು ವ್ಯವಸ್ಥಿತವಾಗಿ ಆಚರಿಸಲು ವಿವಿಧ ಸಮಿತಿಗಳನ್ನು ರಚಿಸಲಾಗಿದ್ದು, ಆಯಾ ಸಮಿತಿಯವರು ತಮ್ಮ ಜವಾಬ್ದಾರಿಯನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಜರುಗಿದ ಗಣರಾಜ್ಯೋತ್ಸವ ಆಚರಣೆಯ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ಗಣರಾಜ್ಯೋತ್ಸವ ದಿನಾಚರಣೆ ಕಾರ್ಯಕ್ರಮದಲ್ಲಿ ಯಾವುದೇ ಲೋಪ-ದೋಷಗಳಾಗದಂತೆ ವ್ಯವಸ್ಥಿತವಾಗಿ ಆಚರಿಸಲು ಕಾರ್ಯನಿರ್ವಹಿಸಬೇಕು ಎಂದರು.

ಗಣರಾಜ್ಯೋತ್ಸವ ದಿನಾಚರಣೆ ಅಂಗವಾಗಿ ಕಾರ್ಯಕ್ರಮದ ಹಿಂದಿನ ದಿನ ಹಾಗೂ ಕಾರ್ಯಕ್ರಮದ ದಿನ ಸರ್ಕಾರಿ ಕಚೇರಿ ಹಾಗೂ ನಗರದ ವಿವಿಧ ವೃತ್ತಗಳಲ್ಲಿ ಸ್ವಚ್ಛತೆಯೊಂದಿಗೆ ವಿದ್ಯುತ್ ದೀಪಾಲಂಕಾರಕ್ಕೆ ಕ್ರಮ ಕೈಗೊಳ್ಳಬೇಕು. ಅವಳಿ ನಗರದ ಪ್ರಮುಖ ಸ್ಥಳಗಳಲ್ಲಿ ಬ್ಯಾನರ್ ಅಳವಡಿಕೆಗೆ ಕ್ರಮ ವಹಿಸಬೇಕು. ಗಣರಾಜ್ಯೋತ್ಸವ ದಿನದಂದು ಎಲ್ಲ ಕಚೇರಿ ಮತ್ತು ಶಾಲಾ ಕಾಲೇಜುಗಳ ಸಿಬ್ಬಂದಿ ತಮ್ಮ ಕಾರ್ಯಾಲಯದ



ಧ್ವಜಾರೋಹಣವನ್ನು ಬೆಳಿಗ್ಗೆ 7.30ರೊಳಗೆ ನೆರವೇರಿಸಿ ಬೆಳಿಗ್ಗೆ 8.30 ಗಂಟೆಗೆ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಹಾಜರಾಗಬೇಕು. ಅಂದು 9 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಿಂದ ಸಾರ್ವಜನಿಕ ಧ್ವಜಾರೋಹಣ ಕಾರ್ಯಕ್ರಮ ಜರುಗಲಿದೆ. ಕಾರ್ಯಕ್ರಮಕ್ಕೆ ಶಾಲಾ-ಕಾಲೇಜುಗಳಿಂದ ವಿದ್ಯಾರ್ಥಿಗಳನ್ನು ವ್ಯವಸ್ಥಿತವಾಗಿ ಕರೆತರುವುದು ಹಾಗೂ ಅವರಿಗೆ ಆಸನದ ವ್ಯವಸ್ಥೆ ಇರುವಂತೆ ನೋಡಿಕೊಳ್ಳಬೇಕು. ಎಲ್ಲ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಕಡ್ಡಾಯವಾಗಿ ಸಾರ್ವಜನಿಕ ಧ್ವಜಾರೋಹಣ ಕಾರ್ಯಕ್ರಮ ಸಮಯಕ್ಕೆ ಸರಿಯಾಗಿ ಹಾಜರಿರಬೇಕು ಎಂದರು.

ಸಭೆಯಲ್ಲಿ ಸಾಂಸ್ಕೃತಿಕ ಕಾರ್ಯಕ್ರಮದ ವ್ಯವಸ್ಥೆ, ಎನ್‌ಎಸ್‌ಎಸ್ ಹಾಗೂ ಎನ್‌ಸಿಸಿ ಪರೇಡ್, ಮೂಲಭೂತ ಸೌಕರ್ಯಗಳ ವ್ಯವಸ್ಥೆ, ವೇದಿಕೆ ನಿರ್ಮಾಣ, ಅಲ್ಪೋಪಹಾರ, ಸನ್ಮಾನ ಕಾರ್ಯಕ್ರಮ ಮುಂತಾದ ವಿಷಯಗಳ ಕುರಿತು ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಜಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ

ಕಾರ್ಯಕ್ರಮದ ಸ್ಥಳದ ಸ್ವಚ್ಛತೆ ಕುರಿತು ಆದ್ಯತೆ ವಹಿಸಬೇಕು. ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಹಾಗೂ ತುರ್ತು ಚಿಕಿತ್ಸೆಗಾಗಿ ಆಂಬುಲೆನ್ಸ್ ವ್ಯವಸ್ಥೆ ಕಾರ್ಯಕ್ರಮದ ಸ್ಥಳದಲ್ಲಿ ಲಭ್ಯವಿರುವಂತೆ ನೋಡಿಕೊಳ್ಳಬೇಕು. ಅತಿಥಿಗಳಿಗೆ ಆಸನದ ವ್ಯವಸ್ಥೆ, ಅಲ್ಪೋಪಹಾರದ ವ್ಯವಸ್ಥೆ ಕುರಿತು ಕ್ರಮ ಕೈಗೊಳ್ಳಬೇಕು. ವಿವಿಧ ರಂಗಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಸಾಧಕರಿಗೆ ಸನ್ಮಾನಿಸುವ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಡೆಸಬೇಕು. ಕಾರ್ಯಕ್ರಮದಲ್ಲಿ ಶಿಷ್ಟಾಚಾರ ಉಲ್ಲಂಘನೆಯಾಗದಂತೆ ನಿಗಾವಹಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಎಂ.ಎಂ. ತುಂಬರಮಟ್ಟಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪನಿರ್ದೇಶಕ ರಮೇಶ್ ಎಸ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಭೂ ದಾಖಲೆ ಇಲಾಖೆ ಉಪನಿರ್ದೇಶಕ ರುದ್ರಗೌಡ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಬಿ. ಮಸನಾಯಕ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

ಜ. 26ರಂದು ಸಂಗೊಳ್ಳಿ ರಾಯಣ್ಣ ಪ್ರಶಸ್ತಿ ಸಮಾರಂಭ, ಸಾಂಸ್ಕೃತಿಕ ಸಂಜೆ

## ಅದ್ದೂರಿ ಕಾರ್ಯಕ್ರಮ ಆಯೋಜನೆ




■ವಿಜಯಸಾಕ್ಷಿ ಸುದ್ದಿ, ಗದಗ

ಗಜೇಂದ್ರಗಡ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಪ್ರತಿಷ್ಠಾನದ ವತಿಯಿಂದ ಜ. 26ರಂದು ಬೆಳಗಾವಿಯ ನಂದಗಡದಲ್ಲಿ ರಾಜ್ಯ ಮಟ್ಟದ ಸಂಗೊಳ್ಳಿ ರಾಯಣ್ಣ ಪ್ರಶಸ್ತಿ ಸಮಾರಂಭ ಹಾಗೂ ಸಾಂಸ್ಕೃತಿಕ ಸಂಜೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಪ್ರತಿಷ್ಠಾನದ ಅಧ್ಯಕ್ಷ ಹೆಚ್.ಎಸ್. ಸೋಂಪೂರ ಹೇಳಿದರು.

ಶುಕ್ರವಾರ ನಗರದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮದಲ್ಲಿ ಧಾರವಾಡದ ರೇವಣಸಿದ್ದೇಶ್ವರ ಪೀಠದ ಶ್ರೀ ಬಸವರಾಜ ದೇವರು, ರಾಜಗುರು ಮಡಿವಾಳ ಮಹಾಸ್ವಾಮಿಗಳು, ಚನ್ನವೀರ ದೇವರು ದಿವ್ಯ ಸಾನ್ನಿಧ್ಯ ವಹಿಸುವರು. ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಕಾರ್ಯಕ್ರಮವನ್ನು ಉದ್ಘಾಟಿಸುವರು. ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ ಅಧ್ಯಕ್ಷತೆ ವಹಿಸುವರು. ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಭುವನೇಶ್ವರಿ ಭಾವಚಿತ್ರ ಅನಾವರಣಗೊಳಿಸುವರು, ವಿಧಾನ ಪರಿಷತ್ ಶಾಸಕ ಚನ್ನರಾಜ ಹಟ್ಟಿಹೊಳಿ ತಾಯಿ ಚನ್ನಮ್ಮ ಭಾವಚಿತ್ರ ಅನಾವರಣಗೊಳಿಸುವರು. ಶಾಸಕ ದೊಡ್ಡನಗೌಡ ಪಾಟೀಲ ಸಂಗೊಳ್ಳಿ ರಾಯಣ್ಣ ಭಾವಚಿತ್ರ ಅನಾವರಣಗೊಳಿಸುವರು ಎಂದು ತಿಳಿಸಿದರು.

ಇದೇ ಸಂಧರ್ಭದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ತಜ್ಞರ ಸಮಿತಿಯ ಅಧ್ಯಕ್ಷರು ಹಾಗೂ ಕರ್ನಾಟಕ ಸರ್ಕಾರದ ಮಾಜಿ ಮುಖ್ಯ ಕಾರ್ಯದರ್ಶಿಗಳಾದ ಬಿ.ಎಸ್. ಪಾಟೀಲರಿಗೆ ರಾಜ್ಯ ಮಟ್ಟದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣರ ಪ್ರಶಸ್ತಿ ನೀಡಲಾಗುವುದು ಎಂದು ಹೆಚ್.ಎಸ್. ಸೋಂಪೂರ ತಿಳಿಸಿದರು.

ಹಾಲುಮತ ಮಹಾಸಭಾದ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಗುಳ್ಳಿ ಮಾತನಾಡಿ, ಕ್ರಾಂತಿವೀರ ಸಂಗೊಳ್ಳಿ ಪ್ರತಿಷ್ಠಾನದಿಂದ ಕಳೆದ 16 ವರ್ಷಗಳಿಂದ ರಾಯಣ್ಣ ಹುತಾತ್ಮ ದಿನಾಚರಣೆ ▶▶3ನೇ ಪುಟಕ್ಕೆ

## ಜ.27ರಂದು ಸವಿತಾ ಮಹರ್ಷಿ ಜಯಂತಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ , ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರ ಸಹಯೋಗದಲ್ಲಿ ಶ್ರೀ ಸವಿತಾ ಮಹರ್ಷಿ ಜಯಂತಿ ಕಾರ್ಯಕ್ರಮವನ್ನು ಗದಗ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಜನವರಿ 27 ರಂದು ಸಾಯಂಕಾಲ 4 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ ಎಸ್ ತಂಗಡಗಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು. ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್. ಕೆ.ಪಾಟೀಲ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕ ಹಾಗೂ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್ , ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್.ಪಾಟೀಲ, ಹಾವೇರಿ ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಂಸದ ಪಿ.ಸಿ.ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷರಾದ ಡಿ.ಆರ್.ಪಾಟೀಲ, ನರಗುಂದ ಶಾಸಕ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ವಿಧಾನ ಪರಿಷತ್ ಶಾಸಕರುಗಳಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ಆಗಮಿಸುವರು. ವಿಶೇಷ ಆಹ್ವಾನಿತರಾಗಿ ಯೋಜನೆ ಕಾರ್ಯಕ್ರಮಗಳು, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಶ್ರೀಮತಿ ಜಾನಕಿ ಕೆ.ಎಂ, ಆಗಮಿಸಲಿದ್ದಾರೆ. ಜಿಲ್ಲಾಧಿಕಾರಿ ಹಾಗೂ ಜಿ.ಪಂ.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಹಾಗೂ ಅಪರ ಜಿಲ್ಲಾ ದಂಡಾಧಿಕಾರಿ ಡಾ.ದುರಗೇಶ್ ಕೆ ಆರ್. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಸವರಾಜ ವಿ ಬಳ್ಳಾರಿ ಸ್ವಾಗತ ಕೋರಿದ್ದಾರೆ.

ರೈತರ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಜ.28ಕ್ಕೆ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಸತ್ಯಾಗ್ರಹ

## ಕಾಂಗ್ರೆಸ್ ಸರ್ಕಾರ ಮಾತು ತಪ್ಪಿದೆ




■ವಿಜಯಸಾಕ್ಷಿ ಸುದ್ದಿ, ಗದಗ

ಬಿಜೆಪಿಯು ಜಾರಿಗೆ ತಂದ ಅಪಾಯಕಾರಿ ಕೃಷಿ ಕಾಯ್ದೆಗಳನ್ನು ರದ್ದು ಮಾಡುತ್ತೇವೆ ಎಂದು ಹೇಳಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ ಇಲ್ಲಿಯವರೆಗೆ ಯಾವುದೇ ರೀತಿಯ ಕ್ರಮ ಕೈಗೊಳ್ಳದಿರುವುದನ್ನು ಖಂಡಿಸಿ ಜ. 28ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಸತ್ಯಾಗ್ರಹ ನಡೆಸಲಾಗುವುದು ಎಂದು ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲಾಧ್ಯಕ್ಷ ಶಂಕರಗೌಡ ಜಯನಗೌಡರ ಹೇಳಿದರು.

ನಗರದ ಪತ್ರಿಕಾಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರೈತರ ಉತ್ಪನ್ನಗಳಿಗೆ ಯೋಗ್ಯ ಬೆಲೆ ಕೊಡುತ್ತೇವೆಂದು ಹೇಳಿ ಅಧಿಕಾರಕ್ಕೆ ಬಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರು ಮಾತಿಗೆ ತಪ್ಪಿದ್ದಾರೆ. ಇವರನ್ನು ಎಚ್ಚರಿಸಲು ವಿಧಾನಸಭೆಯ ಅಧಿವೇಶನ ನಡೆಯುವ ಸಂದರ್ಭದಲ್ಲಿ ಸತ್ಯಾಗ್ರಹ ನಡೆಸಲಾಗುವುದು ಎಂದರು.

ಭೂಸುಧಾರಣೆ ಕಾಯ್ದೆ 2020 ಹಾಗೂ ಭೂಸ್ವಾಧೀನ ಕಾಯ್ದೆ 2013ಕ್ಕೆ ತಂದಿರುವ ತಿದ್ದುಪಡಿ ರದ್ದು ಮಾಡಬೇಕು, ಎಂಎಸ್‌ಪಿ ಕನಿಷ್ಠ ಬೆಂಬಲ ಬೆಲೆ ನಿಗದಿ, ಕೃಷಿ ಮಾರುಕಟ್ಟೆಯಲ್ಲಿ ಖರೀದಿ ಕೇಂದ್ರವನ್ನು ತೆರೆದಿರಲು ಬೇಕಾದ ಸಂಪನ್ಮೂಲ ಕನಿಷ್ಠ 10 ಸಾವಿರ ಕೋಟಿ ಆವರ್ತ ನಿಧಿ ಮೀಸಲಿಡಬೇಕು, ಭೂಸ್ವಾಧೀನ ಕಾಯ್ದೆ 2013ಕ್ಕೆ ವಿರುದ್ಧವಾಗಿ ರೈತರ ಭೂಮಿಯನ್ನು ಬಲವಂತದಿಂದ ಕಿತ್ತುಕೊಳ್ಳುವುದನ್ನು ಕೂಡಲೇ ಕೈಬಿಡಬೇಕು ಇತ್ಯಾದಿ ವಿವಿಧ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಶಂಕರಗೌಡ ಜಯನಗೌಡರ ಹೇಳಿದರು.

▶▶3ನೇ ಪುಟಕ್ಕೆ

# ಶ್ರೀ ಹೊಳಲಮ್ಮದೇವಿಯ ಪ್ರಾಣ ಪ್ರತಿಷ್ಠಾಪನೆ ನಾಳೆ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ತಾಲೂಕಿನ ಶ್ರೀಮಂತಗಡದ ಶ್ರೀ ಹೊಳಲಮ್ಮದೇವಿ ದೇವಸ್ಥಾನದಲ್ಲಿ ವಿವಿಧ ಅಭಿವೃದ್ಧಿ ಕೆಲಸಗಳು ನಡೆಯುತ್ತಿದ್ದರಿಂದ ಗರ್ಭಗುಡಿಯನ್ನು ಮುಚ್ಚಲಾಗಿತ್ತು.

ಇದೀಗ ಶ್ರೀ ಹೊಳಲಮ್ಮದೇವಿಯ ಪ್ರಾಣ ಪ್ರತಿಷ್ಠಪನಾ ಕಾರ್ಯಕ್ರಮದ ನಿಮಿತ್ತ ಜ.23ರ ಶುಕ್ರವಾರ ಸಾಯಂಕಾಲ 5.30ಕ್ಕೆ ಗೋಮಾತಾ ಪೂಜೆ, ಮುತ್ತೈದೆಯರಿಂದ ಪೂರ್ಣಕುಂಭ ಪೂಜಾ ಪ್ರವೇಶ ಕಾರ್ಯಕ್ರಮ ನೆರವೇರಿದ್ದು, ಜ.24ರಂದು ದೇವತಾ ಶಾಂತಿ ಪೂಜಾ ಕಾರ್ಯಕ್ರಮ ಜರುಗಲಿದೆ. ಜ. 25ರಂದು ಬ್ರಾಹ್ಮಿ ಮುಹೂರ್ತದಲ್ಲಿ ಶ್ರೀ ಹೊಳಲಮ್ಮ ದೇವಿಯ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಹಾಗೂ ದೇವತಾ ಶಾಂತಿಹೋಮ, ಗೋ ಹೋಮ, ಪೂರ್ಣಾಹುತಿ ಕಾರ್ಯಕ್ರಮ ನಡೆಯಲಿದೆ.

ಈ ಎಲ್ಲಾ ಕಾರ್ಯಕ್ರಮಗಳು ಬನ್ನಿಕೊಪ್ಪದ ಸುಜ್ಞಾನದೇವ ಶಿವಾಚಾರ್ಯ ಸ್ವಾಮೀಜಿ ಹಾಗೂ ಬೆಳ್ಳಟ್ಟಿಯ ಬಸವರಾಜ ಸ್ವಾಮೀಜಿ ಇವರ ಅಮೃತ ಹಸ್ತದಿಂದ ನೆರವೇರಲಿದೆ ಎಂದು ಟ್ರಸ್ಟ್ ಕಮಿಟಿ ಪ್ರಕಟಣೆಯಲ್ಲಿ ತಿಳಿಸಿದೆ.

**ಜ. 25ರಂದು ಬಳಗಾನೂರಿನ ಜಾತ್ರಾ ಮಹೋತ್ಸವದಲ್ಲಿ ಪ್ರಶಸ್ತಿ ಪ್ರದಾನ ನಿಮಿತ್ತ ಸಾಧಕರ ಪರಿಚಯ ಲೇಖನ**

# ಸಾಧಕ ರತ್ನಗಳಿಗೆ 'ಶರಣಶ್ರೀ ಪ್ರಶಸ್ತಿ'



**ಕವಿತಾ ಮಿಶ್ರಾ** ಹೈದರಾಬಾದ ಕರ್ನಾಟಕ ಪ್ರದೇಶದ ರಾಯಚೂರ ಜಿಲ್ಲೆಯ ಶಿರವಾರ ತಾಲೂಕು ಕವಿತಾಳ ಗ್ರಾಮದವರು. ವಿದ್ಯಾಕಾಶಿ ಧಾರವಾಡದ ಪ್ರಸೆಂಟೇಶನ್ ಸ್ಕೂಲ್‌ನಲ್ಲಿ ಪ್ರಾಥಮಿಕ ಶಿಕ್ಷಣ, ಕಿಟಲ್ ಕಾಲೇಜಿನಲ್ಲಿ ಪಿಯುಸಿ ವ್ಯಾಸಂಗ ಮಾಡಿ ನಾಡಿನ ಪ್ರತಿಷ್ಠಿತ ಹುಬ್ಬಳ್ಳಿಯ ಬಿ.ವ್ಹಿ. ಭೂಮರಡ್ಡಿ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಬಿ.ಇ. ಸಿವ್ಹಿಲ್ ಪದವಿ ಹಾಗೂ ಮನಃಶಾಸ್ತ್ರದಲ್ಲಿ ಸ್ನಾತಕೋತ್ತರ ಪದವಿ ಗಳಿಸಿದರು.

ಓದಿದ್ದು ಇಂಜಿನಿಯರಿಂಗ್ ಹಾಗೂ ಮನಃಶಾಸ್ತ್ರ ವಿಷಯವಾದರೂ ಸಹ ಇವರು ಕೃಷಿ, ತೋಟಗಾರಿಕೆ, ಅರಣ್ಯ ವಿಜ್ಞಾನದಲ್ಲಿ ಆಸಕ್ತಿ ತೋರಿಸಿದರು. ಜೇನು ಕೃಷಿ, ಕುರಿ ಸಾಕಾಣಿಕೆ, ಕುಕ್ಕುಟೋದ್ಯಮ, ಪಶುಪಾಲನೆ, ಹೈನುಗಾರಿಕೆ, ಸಸ್ಯಗಳ ಪಾಲನೆ (ನರ್ಸರಿ) ಮನಃಪೂರ್ವಕವಾಗಿ ಮಾಡಿ ನಿರೀಕ್ಷೆಗೂ ಮೀರಿದ ಆದಾಯ ಗಳಿಸುವುದರ ಜೊತೆಗೆ ಕೋಟಿ ವಿದ್ಯೆಗಳಲ್ಲಿ ಮೇಟಿ ವಿದ್ಯೆಯೇ ಮೇಲು ಎಂಬುದನ್ನು ಸಾಕಾರಗೊಳಿಸಿದ ಶ್ರೇಯಸ್ಸು ಇವರದಾಗಿದೆ.

ಮನಸ್ಸಿದ್ದಲ್ಲಿ ಮಾರ್ಗವೆಂಬಂತೆ ನಮ್ಮ ದೇಶದ ಮೂಲ ಕಸಬನ್ನು ನಿರ್ವಹಿಸಿ ಅದರಲ್ಲಿ ಯಶಸ್ಸನ್ನು ಕಾಣುವುದರ ಮೂಲಕ ಯುವಸಮುದಾಯಕ್ಕೆ, ರೈತ ವರ್ಗಕ್ಕೆ ಮಾದರಿಯಾಗಿರುವರು. ಬೀದರ ಪಶುವೈದ್ಯಕೀಯ, ಮೀನುಗಾರಿಕಾ ವಿಶ್ವವಿದ್ಯಾಲಯದ ಆಡಳಿತ ಮಂಡಳಿಯ ಸದಸ್ಯರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ರಾಯಚೂರು ಕೃಷಿ ವಿ.ವಿಯಿಂದ ಅತ್ಯುತ್ತಮ ಕೃಷಿಕ ಪ್ರಶಸ್ತಿ, ಹೈದಾರಾಬಾದ ಅಂತಾರಾಷ್ಟ್ರೀಯ ಸಂಶೋಧನಾ ಸಂಸ್ಥೆಯಿಂದ ಸುವರ್ಣ ಪ್ರಶಸ್ತಿ, ಬಾಗಲಕೋಟೆ ತೋಟಗಾರಿಕಾ ವಿ.ವಿಯಿಂದ ಅತ್ಯುತ್ತಮ ತೋಟಗಾರಿಕಾ ರೈತ ಮಹಿಳೆ ಪ್ರಶಸ್ತಿ, ಕೇಂದ್ರ ಸರ್ಕಾರದ ಕೃಷಿ ವಿಜ್ಞಾನ ಸಚಿವಾಲಯದಿಂದ ಕೃಷಿಕ ಪ್ರಶಸ್ತಿ ಜೊತೆಗೆ ಕೃಷಿ ಆಹಾರ ತಂತ್ರಜ್ಞಾನ ಸಚಿವಾಲಯದಿಂದ ಆರ್.ಎಸ್.ಎಸ್ ದೆಹಲಿಯವರಿಂದ ಪ್ರೇರಣಾದೀಪ ಗೌರವ ಪ್ರಶಸ್ತಿ ಸೇರಿದಂತೆ ಹಲವಾರು ಪ್ರಶಸ್ತಿ, ಸನ್ಮಾನಗಳಿಗೆ ಭಾಜನರಾಗಿದ್ದಾರೆ.

ಅವರಗೀಗ ಚಿಕೇನಕೊಪ್ಪದ ಶ್ರೀಚನ್ನವೀರ ಶರಣರ ಮಠ ಸುಕ್ಷೇತ್ರ ಬಳಗಾನೂರ ಹಾಗೂ ಸಿದ್ಧಲಿಂಗನಗೌಡ ಎಸ್.ಜಂಗ್ಲೆಪ್ಪಗೌಡ್ರ ಉಮಾ ವಿದ್ಯಾಶ್ರೀ ಟ್ರಸ್ಟ್ ನವಲಗುಂದ ಅವರ ಸಹಯೋಗದಲ್ಲಿ ಶರಣಶ್ರೀ ಪ್ರಶಸ್ತಿಗೆ ಪಾತ್ರರಾಗಿದ್ದಾರೆ.



ಚಲನಚಿತ್ರ ಹಿನ್ನೆಲೆ ಗಾಯಕ **ಕಡಬಗೇರಿ ಮುನಿರಾಜು** ಬೆಂಗಳೂರು ಎಂ.ಕೆಂಪಯ್ಯ ಪುತ್ರ. ಕನ್ನಡ ವಿಷಯದಲ್ಲಿ ಸ್ನಾತಕೋತ್ತರ ಪದವಿ ಪಡೆದು ನಾಡಿನ ಶ್ರೇಷ್ಠ ಜನಪದ ಕಲಾವಿದರಾಗಿ, ಹಿನ್ನೆಲೆ ಗಾಯಕರಾಗಿ ಪ್ರಸಿದ್ಧಿ ಪಡೆದಿದ್ದಾರೆ. ಅನೇಕ ಚಲನಚಿತ್ರ ಗೀತೆಗಳಿಗೆ ಹಿನ್ನೆಲೆ ನೀಡಿ, ಅವುಗಳಿಗೆ ಜೀವತುಂಬಿ ಚಲನಚಿತ್ರ ಯಶಸ್ವಿಯಾಗಲು ಹೆಚ್ಚು ಶ್ರಮಿಸುತ್ತಿರುವರು. ಸುಮಾರು 60 ಚಲನಚಿತ್ರಗಳಿಗೆ ಹಿನ್ನೆಲೆ ಗಾಯನ ನೀಡಿದ ಹೆಗ್ಗಳಿಕೆ ಇವರದಾಗಿದೆ. ದಕ್ಷಿಣ ಭಾರತ ಮಿರ್ಚಿ ಸಂಗೀತ ಪ್ರಶಸ್ತಿ, ಚಂದನವನ ಸಿನಿಮಾ ಪ್ರಶಸ್ತಿ, ಆದಿಜ್ಯೋತಿ ಬ್ಯಾನೋ ರಾಷ್ಟ್ರೀಯ ಪ್ರಶಸ್ತಿ, ನಾಡಪ್ರಭು ಕೆಂಪೇಗೌಡ ಪ್ರಶಸ್ತಿ, ನಟಸಾರ್ವಭೌಮ ಡಾ. ರಾಜಕುಮಾರ ಚಾಲುಕ್ಯ ಪ್ರಶಸ್ತಿಯು ಜಾನಪದ ಕ್ಷೇತ್ರದ ಬೆಳವಣಿಗೆ ಹಾಗೂ ಯುವ ಸಬಲೀಕರಣಕ್ಕಾಗಿ ಕಾರ್ಯಕ್ರಮಗಳನ್ನು ನೀಡಿರುವುದರ ಪ್ರಯುಕ್ತ ಲಭಿಸಿವೆ.

ಅತ್ಯುತ್ತಮ ಹಾಡುಗಾರ ಎಂದು 2023-24ರಲ್ಲಿ ನಾಮನಿರ್ದೇಶಿತರಾಗಿದ್ದಾರೆ. 4 ಸಾವಿರಕ್ಕೂ ಹೆಚ್ಚು ಕಾರ್ಯಕ್ರಮಗಳನ್ನು ನಾಡಿನ ಒಳ-ಹೊರಗೆ ನೀಡಿ ಜನರಲ್ಲಿ ಜನಪದ ಜಾಗೃತಿ ಮೂಡಿಸುವುದರ ಮೂಲಕ ಜನಪದ, ಕಲೆಯ ಉಳಿವು ಬೆಳವಣಿಗೆಗೆ ಶ್ರಮಿಸುತ್ತಿದ್ದಾರೆ. ಡಿಡಿ ಚಂದನ ದೂರದರ್ಶನದಿಂದ ಗಾನಗಾರುಡಿಗ ಪ್ರಶಸ್ತಿಗೆ ಪಾತ್ರರಾದ ಅವರಗೀಗ ಶರಣಶ್ರೀ ಪ್ರಶಸ್ತಿಗೆ ಭಾಜನರಾಗಿದ್ದಾರೆ.



**ಅನ್ನಪೂರ್ಣ ಬಸಯ್ಯ ಬಳೂಲಮಠ** ಬಸವನಾಡು ಬಾಗಲಕೋಟೆ ನಗರದ ಸರಳ ಸಾತ್ವಿಕ ಶರಣಜೀವಿ, ವೇ.ಮೂ. ಬಸಯ್ಯ-ಪ್ರಭಾವತಿ ಅವರ ಪುಣ್ಯಗರ್ಭದಲ್ಲಿ 23-02-1998ರಂದು ಜನಿಸಿದರು. ಇವರ ಕುಟುಂಬ ಪೂಜ್ಯ ಶರಣರ ಪ್ರಭಾವ ವಲಯದಲ್ಲಿ ಬೆಳೆದು ಬಂದಿರುವುದು ಹೆಮ್ಮೆ. ಇವರು ಪ್ರಾಥಮಿಕ ಶಿಕ್ಷಣದಿಂದ ಬಿ.ಇ. ಪದವಿಯವರೆಗೆ ಬಾಗಲಕೋಟೆಯಲ್ಲಿ ಶಿಕ್ಷಣ ಪೂರೈಸಿದರು. ಬೆಳೆಯುವ ಸಿರಿ ಮೊಳಕೆಯಲ್ಲಿ ನೋಡು ಎಂಬಂತೆ ಬಾಲ್ಯದಿಂದಲೂ ಸತತ ಅಭ್ಯಾಸ, ಅಧ್ಯಯನ, ಓದು, ಬರಹಗಳೊಂದಿಗೆ ಮುಂಚೂಣಿಯಲ್ಲಿದ್ದು, ಪ್ರತಿಭಾಶಾಲಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿ ಬಿ.ಇ. ಸಿವ್ಹಿಲ್ ವಿಭಾಗದಲ್ಲಿ ಉತ್ತಮ ದರ್ಜೆಯಲ್ಲಿ ತೇರ್ಗಡೆ ಹೊಂದಿ ನಾಡಿನ ಪ್ರತಿಷ್ಠಿತ ಸುರತಕಲ್ ಇಂಜಿನಿಯರಿಂಗ್ ಕಾಲೇಜಿನಲ್ಲಿ ಎಂ.ಟೆಕ್ ಸ್ನಾತಕೋತ್ತರ ಪದವಿಯನ್ನು ವ್ಯಾಸಂಗ ಮಾಡಿ ತೇರ್ಗಡೆ ಹೊಂದಿದರು.

ರಾಷ್ಟ್ರದ ಪ್ರತಿಷ್ಠಿತ ಧಾರವಾಡ ಐ.ಐ.ಟಿಯಲ್ಲಿ ಸಂಶೋಧನಾ ವಿದ್ಯಾರ್ಥಿಯಾಗಿ ಆಯ್ಕೆಯಾಗಿ ಹೈಡ್ರೋ ಮೆಕ್ಯಾನಿಕಲ್ ಬಿಹ್ವೇಯರ್ ಆಫ್ ಅನ್‌ಸ್ಯಾಚ್ಯೂರೇಟಡ್ ರೈಲ್ವೇ ಎಂಬಾಕಮೆಂಟ್ ವಿಷಯವನ್ನು ಆಧರಿಸಿ ಪ್ರಸ್ತುತ ರೈಲುಮಾರ್ಗದಲ್ಲಿಯ ಮಣ್ಣಿನ ಗುಣಲಕ್ಷಣಗಳು ಕುರಿತು ವಿಶೇಷ ಸಂಶೋಧನೆ ಕೈಗೊಂಡಿರುವುದು ಹೆಮ್ಮೆಯ ಸಂಗತಿಯಾಗಿದೆ. ಅನೇಕ ಶೈಕ್ಷಣಿಕ ಕಾರ್ಯಾಗಾರಗಳಲ್ಲಿ ಭಾಗವಹಿಸಿದ ಇವರು ತಮ್ಮ ಅಭ್ಯಾಸಪೂರ್ಣ ವಿದ್ವತ್‌ಪೂರ್ಣ ಪ್ರಬಂಧಗಳನ್ನು ಮಂಡಿಸಿ, ಪ್ರಸ್ತುತ ವಿಷಯಗಳ ಕುರಿತು ವಿಶೇಷ ಬೆಳಕು ಚೆಲ್ಲಿರುವರು. ಬಿ.ಟೆಕ್ ಪದವಿಯಲ್ಲಿ 6ನೇ ರ್‍ಯಾಂಕ್ ಗಳಿಸುವುದರ ಮೂಲಕ ಎಲ್ಲರ ಗಮನ ಸೆಳೆದಿದ್ದಾರೆ.

ಸುರಂಗಮಾರ್ಗದ ಕುರಿತು ಮಣ್ಣಿನಲ್ಲಿಯ ಖನಿಜಾಂಶಗಳು, ಅವುಗಳ ವಿಧಗಳ ಕುರಿತು ಬಹುಕರಾರುವಕ್ಕಾಗಿ ಅಧ್ಯಯನ ಮಾಡುವುದರ ಮೂಲಕ ವಿಷಯಪ್ರಭುತ್ವ ಹೊಂದಿದ್ದಾರೆ. ಸಿವ್ಹಿಲ್ ಇಂಜಿನಿಯರಿಂಗ್ ಕ್ಷೇತ್ರದಲ್ಲಿ ಹೊಸಭರವಸೆ, ನಿರೀಕ್ಷೆಗಳನ್ನು ಹೊಂದಿರುವ ಇವರು ನವ-ನವೀನ ಸಂಶೋಧನೆಗಳ ಮೂಲಕ ಆ ಕ್ಷೇತ್ರವನ್ನು ಶ್ರೀಮಂತಗೊಳಿಸುತ್ತಿದ್ದಾರೆ. ಇವರ ಗ್ರಂಥಗಳ ಪ್ರಕಟಣೆ ಅಧ್ಯಯನಾಸಕ್ತರಿಗೆ ಆಕರಗ್ರಂಥಗಳಾಗಿರುವುದು ಇವರ ಬಹುಮುಖ ಪ್ರತಿಭಾಸಂಪನ್ನತೆಗೆ ಸಾಕ್ಷಿಯಾಗಿದೆ. ಅನೇಕ ಪ್ರಶಸ್ತಿ-ಪುರಸ್ಕಾರಗಳಿಗೆ ಭಾಜನರಾದ ಅವರಗೀಗ ಚಿಕೇನಕೊಪ್ಪದ ಶ್ರೀಚನ್ನವೀರ ಶರಣರ ಮಠ ಸುಕ್ಷೇತ್ರ ಬಳಗಾನೂರ ಹಾಗೂ ಸಿದ್ಧಲಿಂಗನಗೌಡ ಎಸ್.ಜಂಗ್ಲೆಪ್ಪಗೌಡ್ರ ಉಮಾ ವಿದ್ಯಾಶ್ರೀ ಟ್ರಸ್ಟ್ ಕೊಡಮಾಡುವ ಶರಣಶ್ರೀ ಪ್ರಶಸ್ತಿಗೆ ಪಾತ್ರರಾಗಿದ್ದಾರೆ.

**- ಬಿ.ವಾಯ್. ಡೊಳ್ಳಿನ.**
ಮುಂಡರಗಿ.

**ಮಹಿಳಾ ಸಹಕಾರ ಸಂಘಗಳ ಅಧ್ಯಕ್ಷರು, ಮುಖ್ಯ ಕಾರ್ಯನಿರ್ವಾಹಕರುಗಳಿಗೆ ವಿಶೇಷ ತರಬೇತಿ ಶಿಬಿರ**

# ತರಬೇತಿ ಪಡೆದು ಆರ್ಥಿಕ ಸದೃಢತೆ ಹೊಂದಿ



■ ವಿಜಯಸಾಕ್ಷಿ ಸುದ್ದಿ, ಗದಗ

ಹಿಂದಿನ ಕಾಲದಿಂದಲೂ ಮಹಿಳೆ ಸಂಗೋಪನೆಯ ಕಾಯಕದಲ್ಲಿ ತನ್ನನ್ನು ತಾನು ತೊಡಗಿಸಿಕೊಂಡಿದ್ದಾಳೆ. ಇದು ಆಕೆಗೆ ಜನ್ಮ ಜಾತವಾದ ಕೌಶಲ್ಯವಾಗಿದ್ದು, ಅವುಗಳನ್ನು ಸಮರ್ಥವಾಗಿ ನಿರ್ವಹಿಸಿಕೊಂಡು ಹೋಗುತ್ತಿದ್ದಾಳೆ. ಮಹಿಳೆಯರು ಸರ್ಕಾರದ ಹಾಗೂ ಇಂತಹ ಕಾರ್ಯಕ್ರಮದ ಹಲವಾರು ಯೋಜನೆಗಳನ್ನು ಸದ್ಬಳಕೆ ಮಾಡಿಕೊಂಡು ಅದಕ್ಕಾಗಿ ನೀಡಲಾಗುವ ತರಬೇತಿಗಳನ್ನು ಪಡೆದು ಬದುಕಿನಲ್ಲಿ ಆರ್ಥಿಕ ಸದೃಢತೆ ಹೊಂದಬೇಕು, ಇದರಿಂದ ಕುಟುಂಬ ನಿರ್ವಹಣೆಗೆ ಸಹಾಯವಾಗಲಿದೆ ಎಂದು ರಾಜ್ಯ ಸಹಕಾರ ಹಾಲು ಉತ್ಪಾದಕರ ಮಹಾಮಂಡಳಿಯ ನಿರ್ದೇಶಕ, ಸಹಕಾರ ರತ್ನ ಪುರಸ್ಕೃತ ಎಚ್.ಜಿ. ಹಿರೇಗೌಡ್ರ ಅಭಿಪ್ರಾಯಪಟ್ಟರು.

ಸಹಕಾರ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಜಿಲ್ಲಾ ಕೌಶಲ್ಯ ಅಭಿವೃದ್ಧಿ ಇಲಾಖೆ, ಅಂಬೇಡ್ಕರ ಅಭಿವೃದ್ಧಿ ನಿಗಮ, ಗದಗ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಹಾಗೂ ಗದಗ ಜಿಲ್ಲಾ ಸಹಕಾರ ಯೂನಿಯನ್ ಇವರುಗಳ ಸಂಯುಕ್ತ ಆಶ್ರಯದಲ್ಲಿ ಗದಗ ಜಿಲ್ಲೆಯ ಎಲ್ಲಾ ಮಹಿಳಾ ಸಹಕಾರ ಸಂಘಗಳ ಅಧ್ಯಕ್ಷರು ಹಾಗೂ ಮುಖ್ಯ ಕಾರ್ಯನಿರ್ವಾಹಕರುಗಳಿಗೆ ಹಮ್ಮಿಕೊಂಡಿದ್ದ ಒಂದು ದಿನದ ವಿಶೇಷ ತರಬೇತಿ ಶಿಬಿರದಲ್ಲಿ ಅವರು ಮಾತನಾಡಿದರು.

ಧಾರವಾಡ ಹಾಲು ಒಕ್ಕೂಟದ ನಿರ್ದೇಶಕ ಲಿಂಗರಾಜಗೌಡ ಎಚ್.ಪಾಟೀಲ ಮಾತನಾಡಿ, ಬಸವಾದಿ ಶರಣರ ಕಾಲಕ್ಕಿಂತ ಮೊದಲು ಮಹಿಳೆಯರನ್ನು ಅಬಲೆಯರು ಎಂದು ಕರೆಯುತ್ತಾ ಬಂದಿದ್ದೇವೆ. ಅಂದಿನ ಕಾಲದಲ್ಲಿ ಮಹಿಳೆಯರಿಗೆ ಯಾವುದೇ ರೀತಿಯ ಸ್ವಾತಂತ್ರ ಇರುತ್ತಿರಲಿಲ್ಲ. ಅಂತಹ ಕಾಲದಲ್ಲಿ ಬಸವಾದಿ ಶರಣರು ಮಹಿಳೆಯರಿಗೆ ಕೂಡಾ ಸಮಾನ ಸ್ಥಾನಮಾನ ಸಿಗಬೇಕೆಂದು ಹೋರಾಟ ಮಾಡುತ್ತಾ ಬಂದು ಇಂದಿನ ಕಾಲದಲ್ಲಿ ಸಾಕಷ್ಟು ಬದಲಾವಣೆಗಳಾಗಿವೆ. ಸಮಾಜದ ದುರ್ಬಲ, ಶೋಷಿತ ಮತ್ತು ಅಸಹಾಯಕ ಮಹಿಳೆಯರ ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿ ಸಾಧಿಸಲು ಸ್ಥಾಪಿಸಲ್ಪಟ್ಟಿರುವ ಮತ್ತು ರಾಜ್ಯದ ಮಹಿಳೆಯರಿಗೆ ನೆರವು ನೀಡುವ ಸರ್ಕಾರದ ಯೋಜನೆಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

> ಗದಗ ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕ ಎಸ್.ಕೆ. ಕುರಡಗಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ, ಮಹಿಳೆಯರಿಗೆ ಸರ್ಕಾರದ ಹಲವಾರು ಸ್ವ-ಉದ್ಯೋಗದ ಯೋಜನೆಗಳಿದ್ದು, ಅದಕ್ಕಾಗಿ ನಿರ್ದಿಷ್ಟ ತರಬೇತಿಗಳನ್ನು ಸರ್ಕಾರದ ವತಿಯಿಂದ ಉಚಿತವಾಗಿ ನೀಡಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ದಂಡಾಪೂರ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ದ್ಯಾಮಣ್ಣ ಸವದತ್ತಿ, ತಾಂಬ್ರಗುಂಡಿ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ಅಧ್ಯಕ್ಷರಾದ ಗಂಗಮ್ಮ ಕಡಕೋಳ, ರಡ್ಡೇರನಾಗನೂರ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ಅಧ್ಯಕ್ಷರಾದ ಸುನಿತಾ ಪಾಟೀಲ, ಒಕ್ಕಲಗೇರಿ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ಅಧ್ಯಕ್ಷರಾದ ಪುಷ್ಪಾ ಜಂತ್ಲಿ, ಹಾಲಕೆರೆ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ಅಧ್ಯಕ್ಷರಾದ ದಾಕ್ಷಾಯಣಿ ಹೊಕ್ಕಳದ, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಛೇರಿಯ ಮಾರಾಟಾಧಿಕಾರಿ ಬಿ.ಆರ್. ನಿಡಗುಂದಿ, ಗದಗ ತಾಲೂಕಿನ ಸಹಕಾರ ಅಭಿವೃದ್ಧಿ ಅಧಿಕಾರಿಗಳಾದ ಎಚ್.ಎಂ. ಶಾಂತಾ, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆಯ ಅಧೀಕ್ಷಕರಾದ ಜಿ.ಎಂ. ಉಳವಿ, ಧಾರವಾಡ ಹಾಲು ಒಕ್ಕೂಟದ ಜಿಲ್ಲಾ ಮುಖ್ಯಸ್ಥರಾದ ಡಾ. ಪ್ರಸನ್ನ ಎಸ್.ಪಟ್ಟೇದ, ಹಾಲು ಒಕ್ಕೂಟದ ವಿಸ್ತರಣಾಧಿಕಾರಿಗಳಾದ ಸಿ.ಎಸ್. ಕಲ್ಲನಗೌಡರ, ಜಿ.ಸಿ. ಸಾಲೋಟಗಿಮಠ, ಬಸವರಾಜ ಜುಮ್ಮಣ್ಣವರ, ಡಿ.ಐ. ನದಾಫ್, ಮಲ್ಲಿಕಾರ್ಜುನ ಉಣಚಗೇರಿ, ಕಿರಣಕುಮಾರ ಹುಗ್ಗಿ ಉಪಸ್ಥಿತರಿದ್ದರು.

ತರಬೇತಿ ಕಾರ್ಯಾಗಾರದಲ್ಲಿ ಡಾ. ಪ್ರಜ್ಞಾ ಮತ್ತಿಹಳ್ಳಿ, ಲಲಿತಾ ಎಸ್. ಅಳವುಂಡಿ, ಡಾ. ಮಲ್ಲೂರ ಬಸವರಾಜ ಎನ್ ಉಪನ್ಯಾಸ ನೀಡಿದರು. ಸಾವಿತ್ರಿ ಮೊರಬದ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಚಂದ್ರಶೇಖರ ಎಸ್.ಕರಿಯಪ್ಪನವರ ಸ್ವಾಗತಿಸಿ ನಿರೂಪಿಸಿದರು. ಮಹಿಳಾ ಸಹಕಾರ ಶಿಕ್ಷಕಿ ರಶೀದಾಬಾನು ಸಿ.ಯಲಿಗಾರ ವಂದಿಸಿದರು.

# ಬೆಳ್ಳಟ್ಟಿಯಲ್ಲಿ ವಿಜೃಂಭಣೆಯ ಹಿಂದೂ ಸಮ್ಮೇಳನ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಬೆಳ್ಳಟ್ಟಿ ಗ್ರಾಮದಲ್ಲಿ ಹೋಬಳಿ ಮಟ್ಟದ ಹಿಂದೂ ಸಮ್ಮೇಳನವು ಸಡಗರ ಸಂಭ್ರಮದಿಂದ ಜರುಗಿತು.

ಗ್ರಾಮದ ಪ್ರಮುಖ ಬೀದಿಗಳಲ್ಲಿ ತಾಯಿ ಭುವನೇಶ್ವರಿಯ ಬೃಹತ್ ಭಾವಚಿತ್ರ ಮೆರವಣಿಗೆಯ ಮೂಲಕ ಶೋಭಾಯಾತ್ರೆ ಹಾಗೂ ಸಂಜೆ 5 ಗಂಟೆಗೆ ಶ್ರೀ ಭೀಮರಡ್ಡಿ ಸರ್ಕಲ್‌ನಲ್ಲಿ ಬೃಹತ್ ಸಮಾವೇಶ ನಡೆಯಿತು.

ಸಮಾವೇಶದ ಸಾನ್ನಿಧ್ಯ ವಹಿಸಿದ್ದ ಬನ್ನಿಕೊಪ್ಪದ ಸುಜ್ಞಾನದೇವ ಸ್ವಾಮೀಜಿ, ಬೆಳ್ಳಟ್ಟಿಯ ಬಸವರಾಜ ಸ್ವಾಮೀಜಿ ಆಶೀರ್ವಚನ ನೀಡಿದರು. ಅಧ್ಯಕ್ಷತೆಯನ್ನು ರಾಜೇಂದ್ರಕುಮಾರ ಹಲಗಲಿ ವಹಿಸಿ ಮಾತನಾಡಿದರು. ದಿಕ್ಸೂಚಿ ಭಾಷಣವನ್ನು ನಾಗಪುರದ ಅಖಿಲ ಭಾರತೀಯ ಸಂಘಟನಾ ಮಂತ್ರಿ ಭಾರತೀಯ ಶಿಕ್ಷಣ ಮಂಡಲದ ಶಂಕರಾನಂದಜಿ ನೀಡಿದರು.

# ಕುಸ್ತಿಯಲ್ಲಿ ರಾಹುಲ್‌ಗೆ ತೃತೀಯ ಸ್ಥಾನ



■ ವಿಜಯಸಾಕ್ಷಿ ಸುದ್ದಿ, ಗದಗ

ಸ್ಥಳೀಯ ಎಸ್.ಎಮ್. ಕೃಷ್ಣಾ ನಗರದ ವಸಂತ ಪ.ಸಿದ್ದಮ್ಮನಹಳ್ಳಿ ಇವರ ಪುತ್ರ ರಾಹುಲ್ ವಸಂತ ಸಿದ್ದಮ್ಮನಹಳ್ಳಿ ಇವರು ತುಮಕೂರಿನಲ್ಲಿ ಜರುಗಿದ ಕರ್ನಾಟಕ ಕ್ರೀಡಾಕೂಟ-2026ರ ಕುಸ್ತಿ ಸ್ಪರ್ಧೆಯ 110 ಕೆಜಿ ವಿಭಾಗದಲ್ಲಿ ತೃತೀಯ ಸ್ಥಾನ ಪಡೆದು ಗದಗ ನಗರಕ್ಕೆ ಕೀರ್ತಿ ತಂದಿದ್ದಾರೆ.

ದಾವಣಗೆರೆ ಜಿಲ್ಲೆಯ ಪೊಲೀಸ್ ಇಲಾಖೆಯ ಕುಸ್ತಿ ತರಬೇತುದಾರಾದ ಶ್ರೀಶೈಲ್ ಹಾಗೂ ಹನುಮಂತ ಅವರು ಪ್ರಶಸ್ತಿ ಪತ್ರವನ್ನು ವಿತರಿಸಿ ಅಭಿನಂದಿಸಿದರು. ಈ ಸಂದರ್ಭದಲ್ಲಿ ಅಂತಾರಾಷ್ಟ್ರೀಯ ಕುಸ್ತಿ ತರಬೇತುದಾರ ಡಾ. ವಿನೋದಕುಮಾರ ಉಪಸ್ಥಿತರಿದ್ದರು.

# ಹೊಳೆಆಲೂರು ವಿದ್ಯಾರ್ಥಿಗಳ ಸಾಧನೆ




■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಮೈಸೂರಿನಲ್ಲಿ ಪ್ರೋಪಾತ್ ಅಕಾಡೆಮಿ ವತಿಯಿಂದ 7ನೇ ರಾಜ್ಯಮಟ್ಟದ ಸ್ಪರ್ಧೆಯಲ್ಲಿ ಸದ್ವಿದ್ಯಾ ಅಬಾಕಸ್ ಬ್ರಾಂಚ್, ಹೊಳೆಆಲೂರು ವತಿಯಿಂದ ಭಾಗವಹಿಸಿದ್ದ 21 ವಿದ್ಯಾರ್ಥಿಗಳು ವಿವಿಧ ವಿಭಾಗಗಳಲ್ಲಿ ಸ್ಪರ್ಧಿಸಿ ಒಟ್ಟು 14 ಟ್ರೋಫಿಗಳನ್ನು ತಮ್ಮದಾಗಿಸಿಕೊಂಡಿದ್ದಾರೆ.

ಜ್ಯೂನಿಯರ್ ವಿಭಾಗದಲ್ಲಿ ನಫೀಸ್ ಕೊತಬಾಳ ಚಾಂಪಿಯನ್ ಆಫ್ ಚಾಂಪಿಯನ್ ಆಗಿ ಹೊರಹೊಮ್ಮಿದರು. ಸಾನ್ವಿ ಕಿತ್ತಲಿ ಪ್ರಥಮ ಸ್ಥಾನ ಪಡೆದರೆ, ಮರಳು ಸಿದ್ದೇಶ್ ಹಿರೇಮಠ, ಮಲ್ಲನಗೌಡ ಕೆಂಚನಗೌಡ್ರ, ಆದಿಲ್ ಕೊತಬಾಳ ಹಾಗೂ ಸುಮಾ ಅಂಗಡಿ ದ್ವಿತೀಯ ಸ್ಥಾನ ಹಾಗೂ ಟ್ರೋಫಿ ಪಡೆದಿದ್ದಾರೆ.

ಸೀನಿಯರ್ ವಿಭಾಗದಲ್ಲಿ ಸಿಂಚನ ಕೊಣ್ಣೂರ ಚಾಂಪಿಯನ್ ಆಫ್ ಚಾಂಪಿಯನ್ ಆಗಿ ಪ್ರಶಸ್ತಿ ಪಡೆದರು. ಗಿರೀಶ್ ಗೌಡ ಚೆನ್ನಪ್ಪ ಗೌಡ್ರ ಹಾಗೂ ತೇಜಸ್ವಿನಿ ಅಜಗುಂಡಿ ಪ್ರಥಮ ಸ್ಥಾನ, ಕೃತಿಕಾ ಬಡಿಗೇರ, ತರುಣ್ ಬಡಿಗೇರ್ ಹಾಗೂ ನಿಸರ್ಗ ಮೆಣಸಗಿ ದ್ವಿತೀಯ ಸ್ಥಾನ ಗಳಿಸಿದರು. ಆಧ್ಯಾ ಪಟ್ಟಣಶೆಟ್ಟಿ ಹಾಗೂ ಲೋಕೇಶ್ವರಿ ಕೆಲೂರ್ ತೃತೀಯ ಸ್ಥಾನ ಪಡೆದಿದ್ದಾರೆ. ಇನ್ನುಳಿದ ವಿದ್ಯಾರ್ಥಿಗಳು ಸಮಾಧಾನಕರ ಬಹುಮಾನಗಳನ್ನು ಪಡೆದು ಸಂಸ್ಥೆಗೆ ಗೌರವ ತಂದಿದ್ದಾರೆ.

ವಿಜೇತರಾದ ಎಲ್ಲಾ ವಿದ್ಯಾರ್ಥಿಗಳಿಗೆ ಸದ್ವಿದ್ಯಾ ಸಂಸ್ಥೆಯ ಪದಾಧಿಕಾರಿಗಳು, ಸದ್ವಿದ್ಯಾ ಶಾಲಾ ಸಿಬ್ಬಂದಿ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸಿದ್ದು, ಮಕ್ಕಳ ಪಾಲಕರು ಕೂಡ ಮೆಚ್ಚುಗೆ ವ್ಯಕ್ತಪಡಿಸಿ ಶುಭ ಹಾರೈಸಿದ್ದಾರೆ.

**ಅಕ್ಷರದ ಮಾತೆ ಸಾವಿತ್ರಿಬಾಯಿ ಫುಲೆ ಅವರ 195ನೇ ಜನ್ಮ ದಿನಾಚರಣೆ**

# ಮಹಿಳೆಯರಿಗೆ ಅಕ್ಷರ ಕಲಿಸಿದ ದಿಟ್ಟೆ ಸಾವಿತ್ರಿಬಾಯಿ ಫುಲೆ

■ ವಿಜಯಸಾಕ್ಷಿ ಸುದ್ದಿ, ಡಂಬಳ

ಅಕ್ಷರ ಕಲಿತರೆ ಅಕ್ಷರಗಳು ನಾಶವಾಗುತ್ತವೆ ಎಂಬ ಕರಾಳ ಶಾಸನ ಜಾರಿಯಲ್ಲಿದ್ದ ಸಂದರ್ಭದಲ್ಲಿ ಮಹಿಳೆಯರಿಗೆ ಅಕ್ಷರ ಕಲಿಸಿದ ಧೀರ ಮಹಿಳೆ ಸಾವಿತ್ರಿಬಾಯಿ ಫುಲೆ ಎಂದು ದಲಿತ ಸಂಘರ್ಷ ಸಮಿತಿ ರಾಜ್ಯ ಸಂಘಟನಾ ಸಂಚಾಲಕ ಎಸ್.ಎನ್. ಬಳ್ಳಾರಿ ಅಭಿಪ್ರಾಯಪಟ್ಟರು.

ಡಂಬಳ ಗ್ರಾಮದ ಕಸ್ತೂರಬಾ ಗಾಂಧಿ ಬಾಲಕಿಯರ ವಸತಿ ವಿದ್ಯಾಲಯದಲ್ಲಿ ಕರ್ನಾಟಕ ದಲಿತ ಮಹಿಳಾ ಸಂಘ ಗದಗ ಶಾಖೆ ಇವರ ಸಂಯುಕ್ತಾಶ್ರಯದಲ್ಲಿ ಅಕ್ಷರದ ಮಾತೆ ಸಾವಿತ್ರಿಬಾಯಿ ಫುಲೆ ಅವರ 195ನೇ ಜನ್ಮ ದಿನಾಚರಣೆ ಹಾಗೂ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕರ ಸನ್ಮಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.



ಅಕ್ಷರಗಳು ಜನಸಾಮಾನ್ಯರೆಲ್ಲರಿಗೂ ತೆರೆದುಕೊಂಡಿರಲಿಲ್ಲ. ಕೆಲವೇ ಜನರ ಸ್ವತ್ತಾಗಿಹೋಗಿತ್ತು. ಅದರಲ್ಲೂ ವಿಶೇಷವಾಗಿ ಮಹಿಳೆ ಅಕ್ಷರ ಕಲಿಯಬಾರದು, ಅವಳು ಅಕ್ಷರ ಕಲಿತರೆ ಅವಳ ಗಂಡ ಸಾಯುತ್ತಾನೆ ಎಂಬ ನಂಬಿಕೆ ಬಲವಾಗಿದ್ದ ಸಂದರ್ಭದಲ್ಲಿ ಸಾವಿತ್ರಿಬಾಯಿ ಫುಲೆ ಮಹಿಳೆಯರಿಗಾಗಿ ಪ್ರತ್ಯೇಕ ಶಾಲೆ ನಡೆಸಿದ ಧೀಮಂತ ಮಹಿಳೆ ಎಂದು ಬಣ್ಣಿಸಿದರು.

ದಲಿತ ಸಂಘರ್ಷ ಸಮಿತಿ ಮಹಿಳಾ ಘಟಕದ ಸಂಚಾಲಕಿ ಸುಶೀಲಾ ಶಿವಾನಂದ ಚಲವಾದಿ ಪ್ರಾಸ್ತಾವಿಕವಾಗಿ ಮಾತನಾಡಿ, ಸಾವಿತ್ರಿಬಾಯಿ ಫುಲೆ ಅಂದು ಮಹಿಳೆಯರ ಎದೆಯಲ್ಲಿ ಹಾಕಿದ ಅಕ್ಷರಗಳು ಇಂದು ದಾಂಗುಡಿ ಇಟ್ಟು ಬೆಳೆಯುತ್ತಿವೆ. ಅಕ್ಷರಗಳ ಆಂತರ್ಯ ಅರಿತ ಮಹಿಳೆ ದೇಶದ ಬೆಳವಣಿಗೆಯಲ್ಲಿ ಮಹತ್ವದ ಪಾತ್ರ ವಹಿಸಿದ್ದಾಳೆ ಎಂದರು.

ಕಸ್ತೂರಬಾಗಾಂಧಿ ವಸತಿ ಶಾಲೆಯ ಪ್ರಾಚಾರ್ಯರಾದ ಎಸ್.ಬಿ. ಅಬ್ಬಿಗೇರಿ ಮಾತನಾಡಿ, ಸಾವಿತ್ರಿಬಾಯಿ ಫುಲೆ ಅವರನ್ನು ಯಾವುದೇ ಒಂದು ಜಾತಿಗೆ ಸೀಮಿತಗೊಳಿಸಬಾರದು. ಮಹಿಳೆಯರು ಶಿಕ್ಷಣ ಪಡೆಯಲು ಆಗದ ಸಂಕಷ್ಟದ ದಿನಗಳಲ್ಲಿ ಅವರು ಅಕ್ಷರ ಕಲಿತು, ಇತರೆ ಮಹಿಳೆಯರಿಗೆ ಕಲಿಸಿದ್ದರು. ಅವರ ಆದರ್ಶಗಳನ್ನು ಮೈಗೂಡಿಸಿಕೊಳ್ಳುವ ಮೂಲಕ ಎಲ್ಲರೂ ಉತ್ತಮ ಜೀವನ ನಡೆಸಬೇಕು ಎಂದರು.

> ದಲಿತ ಸಂಘರ್ಷ ಸಮಿತಿ ಜಿಲ್ಲಾ ಘಟಕದ ಅಧ್ಯಕ್ಷ ದುರಗಪ್ಪ ಎಲ್.ಹರಿಜನ ಮಾತನಾಡಿ, ಕಣ್ಣರಿಯದಿದ್ದರೂ ಕರುಳರಿಯುತ್ತದೆ ಎಂಬಂತೆ 12ನೇ ಶತಮಾನದಲ್ಲಿ ಬಸವಣ್ಣನವರ ಸ್ತ್ರೀಪರವಾದ ಧೋರಣೆ ಅರಿತವರಂತೆ ಫುಲೆ ದಂಪತಿ ಅಕ್ಷರಗಳನ್ನು ಬಳಸಿ ಬಹುದೊಡ್ಡ ಕ್ರಾಂತಿ ಮಾಡಿದರು. ಅಬಲೆಯರಿಗೆ, ನಿರ್ಗತಿಕರಿಗೆ, ಗರ್ಭಿಣಿಯರಿಗೆ, ವಿಧವೆಯರ ಕಣ್ಣೀರ ಒರೆಸಿ ಚೈತನ್ಯ ತುಂಬಿದ ಮಹಾತಾಯಿ ಜ್ಯೋತಿಬಾ ಫುಲೆ ಎಂದರು.

ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿನಿಯರಾದ ಸುಕನ್ಯಾ ಮಲ್ಲಾಡದ, ಸುಚೇತಾ ಈಟಿ, ಸುಷ್ಮಿತಾ ಮ್ಯಾಗೇರಿ, ದಯಾನಿಧಿ ಲಮಾಣಿ, ಸರಸ್ವತಿ ನೋಟಗಾರ ಇವರಿಗೆ ಸಾವಿತ್ರಿಬಾಯಿ ಫುಲೆ ಅವರ ಪುಸ್ತಕ ನೀಡಿ ಸನ್ಮಾನಿಸಲಾಯಿತು. ದಲಿತ ಸಂಘರ್ಷ ಸಮಿತಿ ತಾಲೂಕು ಸಂಚಾಲಕ ಸೋಮಪ್ಪ ಹೈತಾಪೂರ, ಶಿಕ್ಷಕ ಮುತ್ತು ಮಾದರ, ಸಂಘಟನಾ ಸಂಚಾಲಕ ನಾಗರಾಜ ನಡುವಿನಕೇರಿ, ಬಸವರಾಜ ಕರಿಯಣ್ಣವರ, ಶಿವಾನಂದ ಛಲವಾದಿ, ಅನ್ನಪೂರ್ಣ ಸಾಲಿಮಠ, ಕಮಲಾಕ್ಷಿ ಬೀಳಗಿ, ಜಯಶ್ರೀ ರಾಮನಗೌಡ, ಮರಿತೆಮ್ಮಪ್ಪ ಆದಮ್ಮನವರ, ರಾಘವೇಂದ್ರ ಹಡಪದ, ವಾಸಪ್ಪ ಕಾಶಭೋವಿ, ವಿದ್ಯಾರ್ಥಿ ಘಟಕದ ಜಿಲ್ಲಾ ಸಂಚಾಲಕ ಕೃಷ್ಣ ಪೂಜಾರ, ಲಲಿತಾ ಬಂಗಾರಶೆಟ್ಟರ, ವಿಜಯಾದೇವಿ ಕಂಬಳಿ, ನೀಲಮ್ಮ ದೊಡ್ಡಮನಿ, ಮರಿಯಪ್ಪ ಸಿದ್ದಣ್ಣವರ, ರೇಣುಕಾ ಮಾದರ, ಮಹಾದೇವಕ್ಕ ಮಾದರ, ಪಾರ್ವತಿ ತಿಮಗೊಂಡವರ, ಸುಧಾ ಮಾದರ, ದೀಪಾ ಹರಿಜನ, ಕಸ್ತೂರಬಾ ಗಾಂಧಿ ಶಾಲೆಯ ಶಿಕ್ಷಕಿಯರಾದ ಬಿ.ವಿ. ತುರಕಾಣಿ, ಯು.ಎಸ್. ಬಾವಿಕಟ್ಟಿ, ರೇಷ್ಮಾ ಬಳ್ಳಾರಿ, ಎಸ್.ಎ. ತಳವಾರ, ಎಸ್.ಟಿ. ಕಳಸಣ್ಣವರ, ಎನ್.ಡಿ. ಶಿರೋಳಕರ, ಎಂ.ಎಫ್. ಆಡೂರ, ಹುಲಗಪ್ಪ ಜೋಂಡಿ ಮುಂತಾದವರು ಭಾಗವಹಿಸಿದ್ದರು.

## ಶ್ರೀ ಶಿವಶಾಂತವೀರ ಶರಣರ ತುಲಾಭಾರ



■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಸುಕ್ಷೇತ್ರ ಬಳಗಾನೂರಿನ ಚಿಕೇನಕೊಪ್ಪದ ಚನ್ನವೀರ ಶರಣರ ಮಠದಲ್ಲಿ ಚನ್ನವೀರ ಶರಣರ 31ನೇ ಪುಣ್ಯಸ್ಮರಣೋತ್ಸವ, ಜಾತ್ರಾ ಮಹೋತ್ಸವದ ಅಂಗವಾಗಿ ಬಳೂಟಗಿ ಹಿರೇಮಠದ ಶ್ರೀ ಶಿವಕುಮಾರ ಮಹಾಸ್ವಾಮಿಗಳಿಂದ ಮಹಾತ್ಮರ ಜೀವನ ದರ್ಶನ, ಪ್ರವಚನ ಜರುಗಿತು.

ಇದೇ ಸಂದರ್ಭದಲ್ಲಿ ದಾಟನಾಳ ಗ್ರಾಮದ ಹಾಗೂ ಬಳಗಾನೂರಿನ ಶಾಂಭವಿ ಅಕ್ಕನ ಬಳಗ ಹಾಗೂ ಚನ್ನವೀರ ಶರಣರ ಭೀಮಾಂಬಿಕಾ ಸೇವಾ ಸಮಿತಿ ಹಳೆ ಮಸೂತಿ ಬಡಾವಣೆಯ ಸಮಸ್ತ ಸದ್ಭಕ್ತರಿಂದ ಶಿವಶಾಂತವೀರ ಶರಣರ ತುಲಾಭಾರದ ಭಕ್ತಿಸೇವೆ ಜರುಗಿತು.

**ಆದಿಶೇಷ ಸಂಸ್ಥಾನ ಹಿರೇಮಠದ 30ನೇ ವರ್ಷದ ಜಾತ್ರಾ ಮಹೋತ್ಸವದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು**

# ಜೀವನದಲ್ಲಿ ಪರಿಶ್ರಮವಿಲ್ಲದೇ ಶ್ರೇಯಸ್ಸು ಸಿದ್ಧಿಸದು

■ ವಿಜಯಸಾಕ್ಷಿ ಸುದ್ದಿ, ಸಿಂಧಗಿ

ಸಂಪತ್ತಿಗಾಗಿ ಎಲ್ಲರ ಹೋರಾಟ. ಆದರೆ ಭೌತಿಕ ಸಂಪತ್ತು ಶಾಶ್ವತವಲ್ಲ. ಆಧ್ಯಾತ್ಮ ಸಂಪತ್ತು ಶಾಶ್ವತ. ನಿರಂತರ ಪರಿಶ್ರಮ ಮತ್ತು ಪ್ರಯತ್ನ ಇಲ್ಲದೇ ಜೀವನದಲ್ಲಿ ಶ್ರೇಯಸ್ಸು ಸಿದ್ಧಿಸದು ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ನಗರದ ಆದಿಶೇಷ ಸಂಸ್ಥಾನ ಹಿರೇಮಠದ 30ನೇ ವರ್ಷದ ಜಾತ್ರಾ ಮಹೋತ್ಸವ ಹಾಗೂ ಡಾ. ಚಂದ್ರಶೇಖರಸ್ವಾಮಿ ಅವರ 55ನೇ ವರ್ಷದ ಅನುಷ್ಠಾನ ಮಂಗಲ ಸಮಾರಂಭದ ಅಂಗವಾಗಿ ಜರುಗಿದ ಜನ ಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.




ಬದುಕಿನ ಬೆಂಗಾಡು ಸಮೃದ್ಧಗೊಳ್ಳಲು ದೇವರ ಕಾರುಣ್ಯ ಕಿರಣ ಬೇಕು. ಸಂಸ್ಕಾರ, ಸಂಸ್ಕೃತಿ ಎಂಬ ಬೀಜ ಬಿತ್ತಿ ಜೀವನದಲ್ಲಿ ಸತ್ಫಲಗಳನ್ನು ಪಡೆಯಬೇಕು. ಬಡತನ ಬಂದಿದೆ ಎಂದು ಕುಗ್ಗಬೇಡ. ಕತ್ತಲೆ ಸರಿದ ನಂತರ ಬೆಳಕು ಬಂದೇ ಬರುತ್ತದೆ ಎಂಬ ನಂಬಿಕೆಯಿರಲಿ. ದೇವರು ಮತ್ತು ಧರ್ಮವನ್ನು ಧಿಕ್ಕರಿಸುವ ಅಜ್ಞಾನಿಗಳಿಗೆ ದೈವ ಕೃಪೆ ಸಿಗದು. ಒಳ್ಳೆಯದಕ್ಕೂ ಕೆಟ್ಟದ್ದಕ್ಕೂ ಮನುಷ್ಯನ ಮನಸ್ಸೇ ಮೂಲ ಕಾರಣ. ನಿರಂತರ ಪ್ರಯತ್ನ ಮತ್ತು ಸಾಧನೆಯಿಂದ ಮನದ ಕಹಿತನ ಕಳೆಯುತ್ತ ಬಂದಾಗ ಜೀವನ ಸಾರ್ಥಕಗೊಳ್ಳುವುದೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ್ದಾರೆ. ನಾಲವಾರ ಆದಿಶೇಷ ಹಿರೇಮಠದ ಡಾ. ಚಂದ್ರಶೇಖರಸ್ವಾಮಿ ಅವರು ಕಳೆದ 55 ವರುಷಗಳಿಂದ ಶಿವಾನುಷ್ಠಾನ ಕೈಕೊಂಡು ಭಕ್ತ ಸಮುದಾಯಕ್ಕೆ ಆಶೀರ್ವದಿಸಿದ್ದನ್ನು ಎಷ್ಟು ನೆನಪಿಸಿದರೂ ಕಡಿಮೆಯೇ. ಪ್ರತಿ ವರುಷ ಆದಿಶೇಷ ಮಠದಲ್ಲಿ ಜಾತ್ರಾ ಮಹೋತ್ಸವ ನಡೆಸಿಕೊಂಡು ಬರುತ್ತಿರುವುದು ಹೆಮ್ಮೆಯ ಸಂಗತಿ. 30ನೇ ವರ್ಷದ ಜಾತ್ರಾ ಮಹೋತ್ಸವ ಬಹಳ ವೈಶಿಷ್ಟ್ಯತೆಯಿಂದ ಜರುಗುತ್ತಿರುವುದು ಸಂತೋಷ ತಂದಿದೆ ಎಂದರು.

ನೇತೃತ್ವ ವಹಿಸಿದ ರಾ-ಜಯೋಗಿ ವೀರಾಜಸ್ವಾಮಿಗಳು ಮಾತನಾಡಿ, ಯಾವ ಸಂಪತ್ತಿಗಾಗಿ ಜಗದ ಜನ ಬದುಕುತ್ತಿದೆಯೋ ಆ ಸಂಪತ್ತಿನ ಪ್ರಾಪ್ತಿಗಾಗಿ ಶ್ರಮಿಸಬೇಕಾಗುತ್ತದೆ. ಶಿವ ಕೊಟ್ಟ ಮಂತ್ರ ಮರೆಯದೇ ಅರಿತು ನಡೆದರೆ ಇದೇ ಜನ್ಮದಲ್ಲಿ ಬಿಡುಗಡೆಯಾಗುತ್ತದೆ. ಶ್ರೀ ಜಗದ್ಗುರು ರೇಣುಕಾಚಾರ್ಯರ ವಿಶ್ವ ಬಂಧುತ್ವದ ಚಿಂತನೆಗಳು ಸಕಲರಿಗೂ ದಾರಿದೀಪವೆಂದರು.

ಹರಸೂರು ಸಿದ್ಧರಾಮ ಶ್ರೀಗಳು, ಮಳಲಿ ಸಂಸ್ಥಾನ ಮಠದ ಡಾ. ನಾಗಭೂಷಣ ಶ್ರೀಗಳು, ಕೆಂಭಾವಿ ಚನ್ನಬಸವ ಶ್ರೀಗಳು, ಮನಗೂಳಿ ಅಭಿನವ ಸಂಗನಬಸವ ಶ್ರೀಗಳು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು.

ಸಮಾರಂಭದಲ್ಲಿ ಶಿವಶರಣಪ್ಪ ಸಿರಿ, ಅಶೋಕ ವಾರದ, ಮಹೇಶ್ವರಿ ವಾಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಗಣ್ಯರಿಗೆ ಮತ್ತು ದಾನಿಗಳಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು. ಪೂಜಾ ನಂದೀಶ ಹಿರೇಮಠ ಮತ್ತು ಸಿದ್ಧಲಿಂಗಯ್ಯ ಹಿರೇಮಠ ನಿರೂಪಿಸಿದರು.

> ಸಮಾರಂಭ ಉದ್ಘಾಟಿಸಿದ ಸಾರಂಗಮಠದ ಡಾ. ಪ್ರಭು ಸಾರಂಗದೇವ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಅಸ್ಥಿರ ದೇಹ ನಂಬಿ ಶಾಶ್ವತ ಸುಖ ಕಳೆದುಕೊಳ್ಳಬಾರದು. ಶ್ರದ್ಧೆ, ನಿಷ್ಠೆ ಮತ್ತು ಅನುಭಾವದಿಂದ ಬದುಕು ಸದೃಢಗೊಳ್ಳುತ್ತದೆ. ಮೃತ್ಯು ಮಾನವರಿಗಷ್ಟೇ ಅಲ್ಲ ಮಹಾತ್ಮರಿಗೂ ಬಿಟ್ಟಿಲ್ಲ. ಜೀವನ ವಿಕಾಸಕ್ಕೆ ಆಧ್ಯಾತ್ಮ ಅರಿವು ಪಡೆದುಕೊಂಡು ಗುರುಕಾರುಣ್ಯಕ್ಕೆ ಒಳಗಾಗಬೇಕು ಎಂದರು.

## ಅಹಂಕಾರ ಮನುಷ್ಯನ ಅಧಃಪತನಕ್ಕೆ ಕಾರಣ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಮನುಷ್ಯ ಸದ್ಗುಣಗಳ ಗ'ಣಿ೦ಎ'ಎಾಗ'ಬ'ೀಕ'ು. ಅರಿಷಡ್ವರ್ಗಗಳನ್ನು ದೂರವಿರಿಸಿ ಆತ ಆದರ್ಶ ವ್ಯಕ್ತಿತ್ವವನ್ನು ತನ್ನಲ್ಲಿ ಬೆಳೆಸಿಕೊಳ್ಳಬೇಕು. ಅಹಂಕಾರಿಯಾದರೆ ಅದೇ ಅವನ ಅಧಃಪತನಕ್ಕೆ ಕಾರಣವಾಗುತ್ತದೆ ಎಂದು ನಿವೃತ್ತ ಮುಖ್ಯ ಶಿಕ್ಷಕ, ಸಾಹಿತಿ ಅರುಣ ಕುಲಕರ್ಣಿ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ನಡೆದಿರುವ 116ನೇ ವರ್ಷದ ಉತ್ಸವದ ಮೊದಲ ದಿನ ಸಂಜೆ ಜರುಗಿದ ಪಾಲಕಿ ಸೇವೆಯಲ್ಲಿ ಅವರು ಮಾತನಾಡಿದರು.

ಅರಿಷಡ್ವರ್ಗಗಳು ಯಾವಾಗಲೂ ಮನುಷ್ಯನನ್ನು ಬಾಧಿಸುತ್ತವೆ. ಇವುಗಳನ್ನು ಕಳೆದುಕೊಳ್ಳಲು ಆತ ಸತ್ಸಂಗದಲ್ಲಿದ್ದರೆ ಮಾತ್ರ ಸಾಧ್ಯವಾಗುತ್ತದೆ. ಸತ್ಸಂಗ ಸುಮ್ಮನೆ ಸಿಗುವಂತಹುದಲ್ಲ. ಅದನ್ನು ನಾವೇ ಹುಡುಕೊಕೊಂಡು ಹೋಗಿ ಪಡೆದುಕೊಳ್ಳಬೇಕು. ಒಮ್ಮೆ ಮನುಷ್ಯ ದುಶ್ಚಟಗಳ ದಾಸನಾದರೆ ಅವನನ್ನು ಆ ಕೂಪದಿಂದ ಹೊರತರುವುದು ಬಹಳಷ್ಟು ಕಷ್ಟವಾಗುತ್ತದೆ. ಆದ್ದರಿಂದ ಯಾವಾಗಲೂ ಸತ್ಸಂಗದಲ್ಲಿದ್ದು, ಒಳ್ಳೆಯ ವಿಚಾರಗಳಿಗೆ ತನ್ನನ್ನು ತಾನು ತೆರೆದುಕೊಳ್ಳಬೇಕೆಂದರು.

ನರೇಗಲ್ಲದ ದತ್ತಾತ್ರೇಯನಿಗೆ ಭಕ್ತರ ಕಾಮಧೇನು, ಕಲ್ಪವೃಕ್ಷವೆಂಬ ಅಭಿದಾನವಿದೆ. ಆತ ಬೇಡಿದ ಭಕ್ತರ ಅಭೀಷ್ಟೆಗಳೆಲ್ಲವನ್ನೂ ನೆರವೇರಿಸುತ್ತಾನೆ. ಎರಡನೇ ಗಾಣಗಾಪುರವೆಂದು ಪ್ರಸಿದ್ಧವಾಗಿರುವ ಇಲ್ಲಿನ ಶ್ರೀ ಗುರು ದತ್ತಾತ್ರೇಯನನ್ನು ಅನನ್ಯ ಭಾವದಿಂದ ಭಜಿಸಿ ಜೀವನದಲ್ಲಿ ನೆಮ್ಮದಿ ಕಾಣೋಣ ಎಂದರು. ಮಂಜುನಾಥ ಕುಲಕರ್ಣಿ ಮತ್ತು ರಂಗನಾಥ ಕುಲಕರ್ಣಿ ಪಾಲಕಿ ಸೇವೆಯ ಕೈಂಕರ್ಯ ಕೈಗೊಂಡರು. ಶ್ರೀವಲ್ಲಭಭಟ್ಟ ಸದರಜೋಷಿ ನೇತೃತ್ವ ವಹಿಸಿದ್ದರು. ಅರುಣ ಜಿ.ಕುಲಕರ್ಣಿ(ಕುರಗಡ್ಡಿ), ಎಸ್.ಎಚ್. ಕುಲಕರ್ಣಿ, ಪ್ರಶಾಂತ ಗ್ರಾಮಪುರೋಹಿತ, ಬಿ.ಎಲ್. ಕುಲಕರ್ಣಿ, ಅಜಿತ ಕುಲಕರ್ಣಿ, ರಾಮಕೃಷ್ಣ ಸದರಜೋಷಿ, ಪದ್ಮಾ ಕುಲಕರ್ಣಿ, ಪಲ್ಲವಿ ಗ್ರಾಮಪುರೋಹಿತ, ಶೋಭಾ ಕುಲಕರ್ಣಿ, ಸೀಮಾ ಕೊಂಡಿ, ಶೋಭಾ ಸೂರಭಟ್ಟನವರ, ಅನಿತಾ ಗ್ರಾಮಪುರೋಹಿತ, ಜಯಶ್ರೀ ಗ್ರಾಮಪುರೋಹಿತ, ಜಯಶ್ರೀ ಕುಲಕರ್ಣಿ, ಭಾರತಿಬಾಯಿ ಗ್ರಾಮಪುರೋಹಿತ, ಕಮಲಾ ಸದಸರಜೋಷಿ, ಕವಿತಾ ಕುಲಕರ್ಣಿ, ಉಮಾಬಾಯಿ ಗ್ರಾಮಪುರೋಹಿತ ಇನ್ನಿತರರಿದ್ದರು. ನಿಖಿತಾ ಗ್ರಾಮಪುರೋಹಿತ ಶ್ರೀ ಬ್ರಹ್ಮಚೈತನ್ಯ ಮಹಾರಾಜರ ಪ್ರವಚನ ಓದಿದರು.

**ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದಲ್ಲಿ ಸಂಕ್ರಾಂತಿ ಸಂಭ್ರಮ**

# ಸಂಕ್ರಾಂತಿ ಸಮಾನತೆ, ಸಂಸ್ಕೃತಿಯ ಸಂಗಮ

■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತವು ಹಬ್ಬ-ಹರಿದಿನಗಳ ತವರೂರು. ಈ ನಾಡಿನಲ್ಲಿ ಯಾವುದೇ ಹಬ್ಬವಿರಲಿ ಅದು ತನ್ನ ವಿಶೇಷತೆ ಹೊಂದಿರುವಂತೆ ಮಕರ ಸಂಕ್ರಾಂತಿ ಕೂಡ ವಿಶಿಷ್ಟ ಹಬ್ಬವಾಗಿದೆ. ನಾವೆಲ್ಲರೂ ಒಂದೇ ಎಂದು ಹೇಳುವುದು ಸಕಲರಿಗೂ ಲೇಸನೆ ಬಯಸುವುದು ನಮ್ಮ ಸಂಸ್ಕೃತಿಯಾಗಿದೆ. ಸಂಕ್ರಾಂತಿಯಂದು ಪುಣ್ಯ ಕ್ಷೇತ್ರಗಳಲ್ಲಿ ಪುಣ್ಯ ಸ್ನಾನ ಮಾಡುವುದು, ಹೊಸ ಬಟ್ಟೆ ಧರಿಸುವುದು ನಮ್ಮಲ್ಲಿ ಸಂಪ್ರದಾಯವಾಗಿ ಬೆಳೆದು ಬಂದಿದೆ. ಹೀಗಾಗಿ ಮಕರ-ಸಂಕ್ರಾಂತಿಯು ಸಮಾನತೆ, ಸಂಸ್ಕೃತಿ, ಸಂಪ್ರದಾಯಗಳ ಸಂಗಮವಾಗಿದೆ ಎಂದು ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಅಧ್ಯಕ್ಷೆ ವಿಜಯಲಕ್ಷ್ಮೀ ಆನೆಹೊಸೂರ ಅಭಿಪ್ರಾಯಪಟ್ಟರು.



ಎಸ್.ವಾಂಛ್.ಬಿ.ಎಂ.ಎಸ್. ಯೋಗಪಾಠಶಾಲೆಯ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ಗದಗ ಇವರು ಸಿದ್ಧಲಿಂಗ ನಗರದಲ್ಲಿನ ಬಸವಪ್ರಭೆ ಕ್ಯಾಂಪಸ್‌ನಲ್ಲಿ ನಡೆಸಿದ 'ಸಂಕ್ರಾಂತಿ-ಸಂಭ್ರಮ-2026' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿಶೇಷ ಆಮಂತ್ರಿತರಾಗಿ ಆಗಮಿಸಿದ ಕುರ್ತಕೋಟಿ ಶ್ರದ್ಧಾ ಜ್ಞಾನ ವಿಕಾಸ ಕೇಂದ್ರದ ತರಬೇತುದಾರರಾದ ಅನಿತಾ ಹೆಬಸೂರಮಠ ಮಾತನಾಡಿ, ಮಹಿಳೆಯರಾದವರು ಕೇವಲ ಹಬ್ಬಗಳನ್ನು ಸಂಭ್ರಮಿಸಿದರೆ ಸಾಲದು, ತಮ್ಮಲ್ಲಿ ಕಲಾ-ಕೌಶಲ್ಯಗಳನ್ನು ಬೆಳೆಸಿಕೊಂಡು ಅವಕಾಶ ದೊರೆತಾಗ ಪ್ರದರ್ಶಿಸಿ ಇತರರಿಗೆ ಮಾದರಿಯಾಗಬೇಕೆಂದರು.

ಕಾರ್ಯಕ್ರಮದಲ್ಲಿ ಲಲಿತಾ ಕಡಗದ, ಗಂಗಾ ಹುಚ್ಚಣ್ಣವರ, ಅಂಬಿಕಾ ರೂಡಗಿ, ಸುಮಾ ಸುರೇಬಾನ, ಜಯಲಕ್ಷ್ಮೀ ಸಜ್ಜನರ, ರೇಖಾ ಗಾಣಿಗೇರ, ಪ್ರಭಾವತಿ ಕುಲಕರ್ಣಿ, ಶೋಭಾ ಭಾಂಡಗೆ, ಕಸ್ತೂರಿ ಮರಿಗೌಡ್ರ, ಅನ್ನಪೂರ್ಣ ಅಸೂಟಿ, ಪುಷ್ಪಾ ಹಿರೇಮಠ, ಮಹಾದೇವಿ ಚರಂತಿಮಠ, ಶಾಂತಾ ಮುಂದಿನಮನಿ, ವೀಣಾ ಅಕ್ಕಿ, ಗಿರಿಜಾ ಅಂಗಡಿ, ಶಕುಂತಲಾ ಬ್ಯಾಳಿ ಮತ್ತು ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಸದಸ್ಯರು ಉಪಸ್ಥಿತರಿದ್ದರು. ವಿಜಯಾ ಚನ್ನಶೆಟ್ಟಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

> ಮರಕ ಸಂಕ್ರಾಂತಿ ಪ್ರಯುಕ್ತ ನಡೆಸಿದ ಮನೋಲ್ಲಾಸ ಕ್ರೀಡೆಗಳಾದ ಬಾಹ್ಯಾಂತರಿಕ ಶಕ್ತಿ ಪ್ರದರ್ಶನ ಸ್ಪರ್ಧೆಯಲ್ಲಿ ಅರುಣಾ ಇಂಗಳಳ್ಳಿ-ಪ್ರಥಮ, ಜಯಶ್ರೀ ವಸ್ತ್ರದ-ದ್ವಿತೀಯ, ಸಂಗೀತಾ ನಾಕೋಡ-ತೃತೀಯ ಸ್ಥಾನ ಪಡೆದರು. ಜಾಗೃತ ಜಾಣ್ಮೆ ಸ್ಪರ್ಧೆಯಲ್ಲಿ ವಿಜಯಲಕ್ಷ್ಮೀ ಮೇಕಳಿ-ಪ್ರಥಮ, ಅರುಣಾ ಇಂಗಳಳ್ಳಿ-ದ್ವಿತೀಯ, ಗೌರಿ ಜಿರಂಕಳಿ-ತೃತೀಯ ಸ್ಥಾನ ಪಡೆದರು. ಯೋಗಾಸನದ ಚಿತ್ರ ನೋಡಿ ಆಸನದ ಹೆಸರು ಹೇಳುವ ಸ್ಪರ್ಧೆಯಲ್ಲಿ ಜಯಶ್ರೀ ಡಾವಣಗೇರಿ-ಪ್ರಥಮ, ವೀಣಾ ಮಾಲಿಪಾಟೀಲ-ದ್ವಿತೀಯ, ಗೌರಿ ಜಿರಂಕಳಿ-ತೃತೀಯ ಸ್ಥಾನ ಪಡೆದರು.

## ಕಾಂಗ್ರೆಸ್ ಸರ್ಕಾರ ಮಾತು ತಪ್ಪಿದೆ

▶▶ ಮೊದಲನೇ ಪುಟದಿಂದ

ಜಿಲ್ಲೆಯ ಕಪ್ಪತ್ತಗುಡ್ಡದ ಅಂಚಿನಲ್ಲಿರುವ ಅರಣ್ಯ ಒತ್ತುವರಿದಾರ ರೈತರಿಗೆ ಸರ್ಕಾರದಿಂದ ಪಟ್ಟಾ ದೊರಕಿಸಿಕೊಡಬೇಕು, ರೈತರ ಹೊಲಗಳಲ್ಲಿ ಹಾವು, ಚೇಳು ಕಡಿದು, ಟ್ರ್ಯಾಕ್ಟರಗಳಿಂದ ಬಿದ್ದು ಸಾವನ್ನಪ್ಪಿರುತ್ತಾರೆ. ಆದ್ದರಿಂದ, ಕಟ್ಟಡ ಕೂಲಿ ಕಾರ್ಮಿಕರಂತೆ ಮಂಡಳಿಯಿಂದ ಬರುವ ಸೌಲಭ್ಯಗಳನ್ನು ಕೃಷಿ ಕೂಲಿ ಕಾರ್ಮಿಕರಿಗೆ ಸರ್ಕಾರದಿಂದ ಸಹಾಯಧನವನ್ನು ಒದಗಿಸಿಕೊಡಬೇಕು ಹಾಗೂ ಜಿಲ್ಲೆಯ ಹುಲಿಗುಡ್ಡದ ಏತ ನೀರಾವರಿ ಅಪೂರ್ಣವಾಗಿದ್ದು, ಇಡೀ ಗದಗ ಜಿಲ್ಲೆಯಾದ್ಯಂತ ರೈತರಿಗೆ ಸರಿಯಾಗಿ ನೀರು ಸಿಗುತ್ತಿಲ್ಲ. ಆದ್ದರಿಂದ ಪ್ರತಿ ರೈತರ ಹೊಲಗಳಿಗೆ ಚಿಟಕಾಲುವೆ ಮತ್ತು ಪೈಪ್‌ಲೈನ್ ಮುಖಾಂತರ ಸಂಪೂರ್ಣ ನೀರಾವರಿ ಒದಗಿಸಿಕೊಡಬೇಕು, ಜಿಲ್ಲೆಯ ಜಾಲವಾಡಗಿ ಏತ ನೀರಾವರಿ ಪೂರ್ಣಗೊಳಿಸಲು ರಾಜ್ಯ ಸರ್ಕಾರ ಬರುವ ಬಜೆಟ್‌ನಲ್ಲಿ ಸರ್ಕಾರದಿಂದ ಹಣ ನಿಗದಿ ಮಾಡಬೇಕು ಇತ್ಯಾದಿ ಇನ್ನೂ ಹಲವಾರು ಬೇಡಿಕೆಗಳ ಈಡೇರಿಕೆಗಾಗಿ ಸತ್ಯಾಗ್ರಹ ನಡೆಸಲಾಗುತ್ತಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಬಸವರಾಜ ನವಲಗುಂದ, ದೃವಕುಮಾರ ಹೂಗಾರ, ಮಂಜುನಾಥ ವಡ್ಡರ, ವೀರೇಶ ಮಾಂಡ್ರೆ, ಶಾಂತಪ್ಪ ಹೊಳ್ಳೆಣ್ಣವರ, ಎಂ.ಪಿ. ಶಾಲಾವಾಡಿ, ಮಂಜುನಗೌಡ ರಾಮನಗೌಡ್ರು, ಗಿರೀಶ ಹೊಸಮನಿ ಇತರರು ಇದ್ದರು.

## ಅದ್ಧೂರಿ ಕಾರ್ಯಕ್ರಮ ಆಯೋಜನೆ

▶▶ ಮೊದಲನೇ ಪುಟದಿಂದ

ಆಚರಿಸುತ್ತಾ ಬಂದಿದ್ದು, ಈ ವರ್ಷ ಇನ್ನು ಅದ್ಧೂರಿಯಾಗಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಈ ಹಿಂದಿನ ಸರ್ಕಾರ ಆದೇಶ ಹೊರಡಿಸಿದಂತೆ ಆಗಸ್ಟ್ 15 ಹಾಗೂ ಜನೆವರಿ 26ರಂದು ಎಲ್ಲ ಜಿಲ್ಲೆಯ ಪ್ರಮುಖ ವೃತ್ತಗಳಲ್ಲಿ ಸಂಗೊಳ್ಳಿ ರಾಯಣ್ಣನ ಭಾವಚಿತ್ರವಿಟ್ಟು ಪೂಜೆ ಸಲ್ಲಿಸಲಾಗಿತ್ತು. ಅದು ಕಡ್ಡಾಯವಾಗಿ ಜಾರಿಯಾಗಬೇಕು ಎಂದು ಹೇಳಿದರು. ಅಹಿಂದ ನಾಯಕಿ ಭಾಗ್ಯಶ್ರೀ ಬಾಬಣ್ಣ ಮಾತನಾಡಿ, ರಾಜ್ಯಮಟ್ಟದ ಈ ಕಾರ್ಯಕ್ರಮಕ್ಕೆ ಎಲ್ಲಾ ಜಿಲ್ಲೆಯಿಂದ ಹೆಚ್ಚಿನ ಜನರು ಆಗಮಿಸಬೇಕೆಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಶೇಖಣ್ಣ ಕಾಳೆ, ಹೇಮಂತ, ನಾಗರಾಜು ಮುಂತಾದವರಿದ್ದರು.

## ಫೆ. 9ರಂದು ಬಹಿರಂಗ ಹರಾಜು

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿನ ಸರಕಾರಿ ವಾಹನ ಸಂಖ್ಯೆ ಕೆ ಎ 26 ಜಿ 0387 ವಾಹನದ ಬಹಿರಂಗ ಹರಾಜು ಮೂಲಕ ವಾಹನ ಎಲ್ಲಿದೆಯೋ ಹೇಗಿದೆಯೋ ಯಥಾಸ್ಥಿತಿಯಲ್ಲಿ ಫೆಬ್ರವರಿ 9 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿನ ಬಹಿರಂಗ ಹರಾಜು ಮಾಡಲಾಗುವುದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಿಜೆಪಿ ಮಹಿಳಾ ಮೋರ್ಚಾದಿಂದ ರಾಜ್ಯಪಾಲರಿಗೆ ಮನವಿ




■ ವಿಜಯಸಾಕ್ಷಿ ಸುದ್ದಿ, ಗದಗ

ನೊಂದ ಅಮಾಯಕ ಮಹಿಳೆಯರು ದೂರು ನೀಡಲು ಕಚೇರಿಗೆ ಬಂದರೆ ಅವರಿಗೆ ಬ್ಲ್ಯಾಕ್‌ಮೇಲ್ ಮಾಡಿ ಅವರೊಂದಿಗೆ ಅಸಭ್ಯವಾಗಿ ವರ್ತಿಸಿದ ಡಿಐಜಿ ರಾಮಚಂದ್ರ ರಾವ್ ಅವರನ್ನು ರಾಜ್ಯ ಸರ್ಕಾರ ಅಮಾನತ್ತು ಮಾಡಿದೆ. ಆದರೆ ರಾಮಚಂದ್ರ ರಾವ್ ಅವರನ್ನು ಕೆಲಸದಿಂದ ಕೂಡಲೇ ವಜಾಗೊಳಿಸಬೇಕು ಎಂದು ಆಗ್ರಹಿಸಿ ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ, ಗದಗ ನಗರ ಮಂಡಲ ಮಹಿಳಾ ಮೋರ್ಚಾ ವತಿಯಿಂದ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯಪಾಲರಿಗೆ ಮನವಿ ಅರ್ಪಿಸಿದರು. ಶಿಡ್ಲಘಟ್ಟ ನಗರಸಭೆಯ ಆಯುಕ್ತರಾದ ಅಮೃತಾ ಗೌಡರಿಗೆ ಅವಾಚ್ಯ ಶಬ್ದಗಳಿಂದ ಬೈದು, ನಗರಸಭೆ ಕಚೇರಿಗೆ ಬೆಂಕಿ ಹಾಕುತ್ತೇನೆ ಎಂದು ಹೇಳಿ ಕೊಲೆ ಬೆದರಿಕೆ ಹಾಕಿದ ರಾಜೀವಗೌಡನ ಮೇಲೆ ಎಫ್‌ಐಆರ್ ಆಗಿ 8 ದಿನಗಳೇ ಕಳೆದರೂ ಇನ್ನೂ ಬಂಧಿಸಿಲ್ಲ. ಕೂಡಲೇ ಆರೋಪಿಯನ್ನು ಬಂಧಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ಮನವಿಯ ಮೂಲಕ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷರಾದ ನಿರ್ಮಲಾ ಕೊಳ್ಳಿ, ಜಿಲ್ಲಾ ಉಪಾಧ್ಯಕ್ಷರಾದ ಜಯಶ್ರೀ ಉಗಲಾಟದ, ಜಿಲ್ಲಾ ಕಾರ್ಯದರ್ಶಿ ಅಶೋಕ ಕುಡತಿನಿ, ಮುಖಂಡರಾದ ಶ್ರೀಪತಿ ಉಡುಪಿ, ಅಶೋಕ ಸಂಕಣ್ಣವರ, ಗದಗ ನಗರ ಮಂಡಲ ಉಪಾಧ್ಯಕ್ಷರಾದ ಪದ್ಮಿನಿ ಮುತ್ತಲದಿನ್ನಿ, ಗದಗ ನಗರ ಮಂಡಲ ಮಹಿಳಾ ಮೋರ್ಚಾ ಅಧ್ಯಕ್ಷರಾದ ವಿಜಯಲಕ್ಷ್ಮೀ ಮಾನ್ವಿ, ಪ್ರಧಾನ ಕಾರ್ಯದರ್ಶಿಗಳಾದ ಸ್ವಾತಿ ಅಕ್ಕಿ, ಕವಿತಾ ಬಂಗಾರಿ, ರೇಖಾ ಬಂಗಾರಶೆಟ್ಟರ, ಮಂಜುನಾಥ ಶಾಂತಗೇರಿ, ಗದಗ ನಗರ ಮಂಡಲ ಕಾರ್ಯದರ್ಶಿಂ ಸಿದ್ರಾಮೇಶ ಹಿರೇಮಠ, ಪ್ರಮುಖರಾದ ಅಶ್ವಿನಿ ಜಗತಾಪ್, ವಂದನಾ ವರ್ಣೇಕರ್, ಜಯಶ್ರೀ ಅಣ್ಣಿಗೇರಿ, ನಗರಸಭಾ ಸದಸ್ಯೆ ಲಕ್ಷ್ಮೀ ಶಂಕರ ಕಾಕಿ, ಮಾಧುಸಾ ಮೇರವಾಡೆ, ರಾಚಯ್ಯ ಹೊಸಮಠ, ದೇವೇಂದ್ರಪ್ಪ ಹೂಗಾರ, ವಿರೂಪಾಕ್ಷಪ್ಪ ಐಲಿ, ಪ್ರೀತಿ ಶಿವಪ್ಪನಮಠ, ರೇಖಾ ಗೌಳಿ, ರವಿ ಮಾನ್ವಿ, ವಿನೋದ ಹಂಸನೂರ ಮುಂತಾದವರಿದ್ದರು.

## ನಿಧನ

### ಬಸವರಾಜ ಕೆಂಗಾರ



**ನರೇಗಲ್ಲ :** ಸಮೀಪದ ಅಬ್ಬಿಗೇರಿ ಗ್ರಾಮದ ನಿವಾಸಿ ಬಸವರಾಜ ಕಾಶಪ್ಪ ಕೆಂಗಾರ (54) ಗುರುವಾರ ನಿಧನ ಹೊಂದಿದರು. ಮೃತರು ಪತ್ನಿ, ಪುತ್ರ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

## ಇಂದು ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರ ಪ್ರವಾಸ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ್ ಕೋಸಂಬೆ ಅವರು ಗದಗ ಜಿಲ್ಲೆಯಲ್ಲಿ ಜನವರಿ 24 ರಂದು ಪ್ರವಾಸ ಕೈಗೊಳ್ಳುತ್ತಿದ್ದು ವಿವರ, ಈ ಕೆಳಗಿನಂತಿದೆ.

ಜನವರಿ 24 ರಂದು ಬೆಳಿಗ್ಗೆ 7 ಗಂಟೆಯಿಂದ 10 ಗಂಟೆಯವರೆಗೆ ಗದಗ ಜಿಲ್ಲೆ ಲಕ್ಷ್ಮೇಶ್ವರದಲ್ಲಿ ಲಿಟಲ್ ಹಾರ್ಟ್ ಇಂಟರ್‌ನ್ಯಾಶನಲ್ ಶಾಲೆಯ ಶಾಲಾ ವಾಹನಕ್ಕೆ ಸಿಲುಕಿ ಮೃತಪಟ್ಟ ಬಾಲಕನ ಕುಟುಂಬದ ಭೇಟಿ ಮತ್ತು ಪ್ರಕರಣದ ಕುರಿತು ಸಂಬಂಧಿಸಿದ ಪೊಲೀಸ್ ಠಾಣೆ, ಉಪನಿರ್ದೇಶಕರು ( ಆಡಳಿತ) , ಶಾಲಾ ಶಿಕ್ಷಣ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಶಿರಹಟ್ಟಿ, ಪ್ರಾದೇಶಿಕ ಸಾರಿಗೆ ಅಧಿಕಾರಿಗಳು, ಶಾಲಾ ಆಡಳಿತ ಮತ್ತು ಮಕ್ಕಳ ವಿಶೇಷ ಪೊಲೀಸ್ ಘಟಕದ ಅಧಿಕಾರಿಗಳೊಂದಿಗೆ ಸಭೆ ನಡೆಸುವರು. ಬೆಳಿಗ್ಗೆ 10 ಗಂಟೆಗೆ ಗದಗಿನಿಂದ ಕೊಪ್ಪಳಕ್ಕೆ ಪ್ರಯಾಣ ಮಾಡುವರು. ಮಧ್ಯಾಹ್ನ 3 ಗಂಟೆಗೆ ಕೊಪ್ಪಳದಿಂದ ಗದಗ ಜಿಲ್ಲೆಗೆ ಆಗಮಿಸುವರು. ಸಂಜೆ 4 ಗಂಟೆಯಿಂದ 6 ಗಂಟೆಯವರೆಗೆ ಗದಗ ನಗರದಲ್ಲಿರುವ ವಸತಿ ನಿಲಯ, ಶಾಲೆ,ಅಂಗನವಾಡಿ, ಪೊಲೀಸ್ ಠಾಣೆ ಮತ್ತು ಮಕ್ಕಳ ಪಾಲನಾ ಸಂಸ್ಥೆಗಳಿಗೆ ಭೇಟಿ ಮತ್ತು ಪರಿಶೀಲನೆ ನಡೆಸುವರು. ರಾತ್ರಿ 9 ಗಂಟೆಗೆ ಕಲಬುರ್ಗಿಗೆ ಪ್ರಯಾಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

## ಸಾರಿಗೆ ಕಾರ್ಯಾಚರಣೆ ವ್ಯತ್ಯಯ ಸಾಧ್ಯತೆ

■ ವಿಜಯಸಾಕ್ಷಿ ಸುದ್ದಿ, ಗದಗ

ಜ. 24ರಂದು ಹುಬ್ಬಳ್ಳಿಯಲ್ಲಿ ಮುಖ್ಯಮಂತ್ರಿರವರ ಉಪಸ್ಥಿತಿಯಲ್ಲಿ ಜರುಗಲಿರುವ ಮಂಟೂರ ರಸ್ತೆಯಲ್ಲಿರುವ ನೂತನ ಮನೆಗಳ ಲೋಕಾರ್ಪಣೆ ಕಾರ್ಯಕ್ರಮಕ್ಕೆ ಪ್ರಾಸಂಗಿಕ ಕರಾರಿನ ಮೇಲೆ 242 ವಾಹನಗಳನ್ನು ನೀಡಲಾಗುತ್ತಿದ್ದು, ಸದರಿ ದಿನದಂದು ಗದಗ ಜಿಲ್ಲೆಯ ವ್ಯಾಪ್ತಿಯಲ್ಲಿನ ಸಾರ್ವಜನಿಕರಿಗೆ ಪ್ರಯಾಣಿಸಲು ಸಾರಿಗೆ ಕಾರ್ಯಾಚರಣೆ ಕಡಿಮೆಯಾಗುವ ಸಾಧ್ಯತೆಗಳಿದ್ದು, ಸದರಿ ದಿನದಂದು ಸಾರ್ವಜನಿಕ ಪ್ರಯಾಣಿಕರು ಹಾಗೂ ಶಾಲಾ-ಕಾಲೇಜು ವಿದ್ಯಾರ್ಥಿಗಳು ಸಹಕರಿಸಬೇಕೆಂದು ಪ್ರಕಟಣೆ ಕೋರಿದೆ.

## ಬೈಕ್ ಟ್ಯಾಕ್ಸಿ ನಿಷೇಧ ರದ್ದುಗೊಳಿಸಿದ ಕರ್ನಾಟಕ ಹೈಕೋರ್ಟ್

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ಹೈಕೋರ್ಟ್ ಜನವರಿ 23 ರಂದು ಬೈಕ್ ಟ್ಯಾಕ್ಸಿಗಳ ಕಾರ್ಯಾಚರಣೆಗೆ ಅನುಮತಿ ನೀಡಿದ್ದು, ಬೈಕ್ ಟ್ಯಾಕ್ಸಿ ಸಂಗ್ರಾಹಕರು, ವೈಯಕ್ತಿಕ ಬೈಕ್ ಟ್ಯಾಕ್ಸಿ ಮಾಲೀಕರು ಮತ್ತು ಇತರರು ಸಲ್ಲಿಸಿದ ಮೇಲ್ಮನವಿಗಳನ್ನು ಅಂಗೀಕರಿಸಿದೆ. ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಮತ್ತು ನ್ಯಾಯಮೂರ್ತಿ ಸಿಎಂ ಜೋಶಿ ಅವರನ್ನೊಳಗೊಂಡ ವಿಭಾಗೀಯ ಪೀಠವು ಮೋಟಾರ್ ಸೈಕಲ್‌ಗಳನ್ನು ಸಾರಿಗೆ ವಾಹನಗಳಾಗಿ ನೋಂದಾಯಿಸಲು ಮತ್ತು ಒಪ್ಪಂದದ ಸಾಗಣೆ ಪರವಾನಗಿಗಳನ್ನು ನೀಡಲು ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಿದೆ. ವಾಹನ ನೋಂದಣಿ ಮತ್ತು ಪರವಾನಗಿಗಳ ವಿತರಣೆ-ಯ ಸಂಬಂಧಿತ ಅಂಶಗಳನ್ನು ಪರಿಶೀಲಿಸಲು ಸಂಬಂಧಪಟ್ಟ ಸಾರಿಗೆ ಅಧಿಕಾರಿಗಳಿಗೆ ಯಾವುದೇ ನಿರ್ಬಂಧವಿಲ್ಲವಾದರೂ, ಮೋಟಾರ್ ಸೈಕಲ್‌ಗಳನ್ನು ಸಾರಿಗೆ ವಾಹನಗಳಾಗಿ ಅಥವಾ ಒಪ್ಪಂದದ ಸಾಗಣೆ ವಾಹನಗಳಾಗಿ ಕಾರ್ಯನಿರ್ವಹಿಸಲು ಸಾಧ್ಯವಿಲ್ಲ ಎಂಬ ಕಾರಣಕ್ಕೆ ಅವರು ನೋಂದಣಿ ಮತ್ತು ಪರವಾನಗಿಯನ್ನು ನಿರಾಕರಿಸಲು ಸಾಧ್ಯವಿಲ್ಲ ಎಂದು ವಿಭಾಗೀಯ ಪೀಠ ಹೇಳಿದೆ. ಪ್ರಾದೇಶಿಕ ಸಾರಿಗೆ ಪ್ರಾಧಿಕಾರವು ಕಾನೂನಿನ ಪ್ರಕಾರ ಪರವಾನಗಿಗಳಿಗೆ ಲಗತ್ತಿಸಲಾದ ಅಗತ್ಯವೆಂದು ಪರಿಗಣಿಸಲಾದ ಷರತ್ತುಗಳನ್ನು ವಿಧಿಸಬಹುದು ಎಂದು ವಿಭಾಗೀಯ ಪೀಠವು ತಿಳಿಸಿದೆ.


## ಜಾಗತಿಕ ಗಮನ ಸೆಳೆಯುತ್ತಿದೆ ಲಕ್ಕುಂಡಿ


▶▶ ಮೊದಲನೇ ಪುಟದಿಂದ

ಮುಗಿದ ಬಳಿಕ ಪುರಾತತ್ವ ಇಲಾಖೆ ಜಾಗವನ್ನು ಹಾಗೆಯೇ ಬಿಟ್ಟು ತೆರಳಿತು. ಇಂದು ಆ ಜಾಗ ಗಿಡಗಂಟಿಗಳಿಂದ ಆವರಿಸಲ್ಪಟ್ಟಿದೆ. ಕೆಲ ಅವಶೇಷಗಳು ಹಾಗೆಯೇ ಬಿದ್ದಿವೆ. ಪರಿಹಾರವೂ ಇಲ್ಲ, ಜಮೀನೂ ಇಲ್ಲದಾಗಿದ್ದು, 23 ವರ್ಷಗಳಿಂದ ರೈತ ಕುಟುಂಬ ನ್ಯಾಯಕ್ಕಾಗಿ ಗೋಳಾಡುತ್ತಿದೆ.

ಒಂದೆಡೆ ಲಕ್ಕುಂಡಿಯ ಇತಿಹಾಸ ವಿಶ್ವಮಟ್ಟದಲ್ಲಿ ಮೆಚ್ಚುಗೆ ಪಡೆಯುತ್ತಿದೆ. ಮತ್ತೊಂದೆಡೆ, ಇತಿಹಾಸಕ್ಕಾಗಿ ಜಮೀನು ಕೊಟ್ಟ ರೈತ ಕುಟುಂಬ ಇನ್ನೂ ನ್ಯಾಯಕ್ಕಾಗಿ ಕಾಯುತ್ತಿದೆ. ಇದು ಲಕ್ಕುಂಡಿಯ ಮತ್ತೊಂದು ಕಹಿ ಸತ್ಯ. ಉತ್ಖನನ ಕಾರ್ಯದ ವೇಳೆ ಕಾರ್ಮಿಕರು ಕನಿಷ್ಠ ವೇತನ ಹಾಗೂ ಸುರಕ್ಷಾ ಕಿಟ್ ನೀಡುವಂತೆ ಆಗ್ರಹಿಸಿ ಪ್ರತಿಭಟನೆ ನಡೆಸಿದರು. ಈ ಹೋರಾಟಕ್ಕೆ ನೆರವು ಕಟ್ಟಡ ಅಸಂಘಟಿತ ಕಾರ್ಮಿಕ ಸಂಘದ ರಾಜ್ಯಾಧ್ಯಕ್ಷ ಅಶ್ವಥ್ ಮರೇಗೌಡ್ರ ನೇತೃತ್ವ ವಹಿಸಿದ್ದರು. ಕಾರ್ಮಿಕರ ಬೆಂಬಲದೊಂದಿಗೆ ಉತ್ಖನನ ಸ್ಥಳದಲ್ಲಿಯೇ ಧರಣಿ ನಡೆಸಲಾಯಿತು. ಆದರೆ, ಈ ಪ್ರತಿಭಟನೆಗೆ ಸಂಬಂಧಿಸಿ ಸ್ಥಳೀಯ ಗ್ರಾಮಸ್ಥರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದು, ಪ್ರತಿಭಟನಾಕಾರರನ್ನು ಹಿಗ್ಗಾಮುಗ್ಗಾ ತರಾಟೆಗೆ ತೆ-ಗೆದುಕೊಂಡ ಘಟನೆ ಕೂಡ ವರದಿಯಾಗಿದೆ.

## ಕಸಾಪ: ಪುಸ್ತಕ ಬಿಡುಗಡೆ ಇಂದು




■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಜ. 24ರಂದು ಸಂಜೆ 6.30ಕ್ಕೆ ತೋಂಟದ ಸಿದ್ಧಲಿಂಗ ಶ್ರೀಗಳ ಕನ್ನಡ ಭವನ, ಕಸಾಪ ಕಾರ್ಯಾಲಯದಲ್ಲಿ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರ ಭಾವಚಿತ್ರ ಅನಾವರಣ ಹಾಗೂ ಮಕ್ಕಳ ಸಾಹಿತಿ ತಯಬಅಲಿ ಹೊಂಬಳ ಅವರ ಮಕ್ಕಳ ಕಥಾ ಸಂಕಲನ 'ಬಾರೋ ಬಾರೋಚಂದ್ರಮ' ಹಾಗೂ ಕಾದಂಬರಿ 'ಮೊದಲ ಸಹಗಮನ' ಪುಸ್ತಕ ಲೋಕಾರ್ಪಣೆ ಸಮಾರಂಭವನ್ನು ಏರ್ಪಡಿಸಲಾಗಿದೆ.

ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರ ಭಾವಚಿತ್ರ ಅನಾವರಣವನ್ನು ಸಂಸ್ಕೃತಿ ಚಿಂತಕರಾದ ಪ್ರೊ. ಕೆ.ಎಚ್. ಬೇಲೂರ ನೆರವೇರಿಸುವರು. ಪುಸ್ತಕ ಬಿಡುಗಡೆಯನ್ನು ಗದಗ ಕಸಾಪ ಮಾಜಿ ಅಧ್ಯಕ್ಷ ಡಾ. ಶಿವಪ್ಪ ಕುರಿ ನೆರವೇರಿಸುವರು. ಅಧ್ಯಕ್ಷತೆಯನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ವಿವೇಕಾನಂದಗೌಡ ಪಾಟೀಲ ವಹಿಸುವರು. ಕಾದಂಬರಿ ಪರಿಚಯವನ್ನು ನೀಲಮ್ಮ ಅಂಗಡಿ ಹಾಗೂ ಮಕ್ಕಳ ಕೃತಿ ಪರಿಚಯವನ್ನು ಕ್ಷಮಾ ವಸ್ತ್ರದ ಮಾಡುವರು. ಕೃತಿಕಾರರಾದ ತಯಬಅಲಿ ಹೊಂಬಳ ಉಪಸ್ಥಿತರಿರುವರು.

ಕಾರ್ಯಕ್ರಮದಲ್ಲಿ ಸಾಹಿತ್ಯಾಭಿಮಾನಿಗಳು, ಸಾಹಿತಿಗಳು, ಪರಿಷತ್ತಿನ ಸದಸ್ಯರು ಭಾಗವಹಿಸಬೇಕೆಂದು ಕಿಶೋರಬಾಬು ನಾಗರಕಟ್ಟಿ, ದತ್ತಪ್ರಸನ್ನ ಪಾಟೀಲ, ಡಿ.ಎಸ್. ಬಾಪುರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಹಿಂಗಾರು ಹಂಗಾಮಿನ ಕಡಲೆ ಬೆಳೆ ಕ್ಷೇತ್ರೋತ್ಸವ ಕಾರ್ಯಕ್ರಮದಲ್ಲಿ ಚೇತನಾ ಪಾಟೀಲ**

# ಉತ್ತಮ ಫಸಲಿಗೆ ಮಣ್ಣು ಪರೀಕ್ಷೆ ಅಗತ್ಯ

■ವಿಜಯಸಾಕ್ಷಿ ಸುದ್ದಿ, ರೋಣ

ರೈತರು ನೈಸರ್ಗಿಕವಾಗಿ ಸಿಗುವ ವಸ್ತುಗಳನ್ನು ಬಳಕೆ ಮಾಡಿಕೊಂಡು ಅದರಿಂದ ಗೊಬ್ಬರ ತಯಾರಿಸಿ ಗುಣಮಟ್ಟದ ಬೆಳೆಗಳನ್ನು ಬೆಳೆಯಲು ಮುಂದಾಗಬೇಕು ಎಂದು ಕೃಷಿ ಇಲಾಖೆಯ ಜಿಲ್ಲಾ ಜಂಟಿ ನಿರ್ದೇಶಕಿ ಚೇತನಾ ಪಾಟೀಲ ಹೇಳಿದರು.

ಅವರು ಶುಕ್ರವಾರ ತಾಲೂಕಿನ ಬಾಸಲಾಪೂರ ಗ್ರಾಮದ ಬಳಿ ಶಿವಯೋಗಿ ನಡುವಿನಮನಿ ಇವರ ಜಮೀನಿನಲ್ಲಿ ಹಿಂಗಾರು ಹಂಗಾಮಿನ ಕಡಲೆ ಬೆಳೆ ಕ್ಷೇತ್ರೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಈಗಿನ ಕಾಲಘಟ್ಟದಲ್ಲಿ ರಾಸಾಯನಿಕ ಗೊಬ್ಬರಗಳನ್ನು ಬಳಕೆ ಮಾಡುವುದು ಹೆಚ್ಚಾಗಿದ್ದು, ಇದು ಸಮಂಜಸವಲ್ಲ. ಬದಲಾಗಿ ರೈತರು ಸಾವಯವ ಗೊಬ್ಬರ ಬಳಕೆಯತ್ತ ಮುಖ ಮಾಡಬೇಕು. ಮನೆಗಳಲ್ಲಿ ಜಾನುವಾರುಗಳ ಸಾಕಾಣಿಕೆ ಮಾಡಬೇಕು. ಇದರಿಂದ ಕುಟುಂಬ ನಿರ್ವಹಣೆ ಜೊತೆಗೆ ಜಮೀನುಗಳಿಗೆ ಗೊಬ್ಬರ ಸಹ ಸಿಗುತ್ತದೆ. ಅಲ್ಲದೆ ಬೇವಿನ ಮರದ ಎಲೆಗಳಿಂದ ಕ್ರಿಮಿನಾಶಕ ಔಷಧಿಗಳನ್ನು ತಯಾರಿಸಬಹುದು. ಕೃಷಿ ಸಂಪನ್ಮೂಲ ವ್ಯಕ್ತಿಗಳು ತಿಳಿಸಿದ ಹಾಗೆ ಪತ್ರಿ ಕಾಯಿಗಳಿಂದ ಗೊಬ್ಬರ ತಯಾರಿಸಿ ಬೆಳೆಗಳಿಗೆ ಸಿಂಪರಣೆ ಮಾಡಬಹುದು. ಸಾವಯವ ಗೊಬ್ಬರ ಬಳಕೆಯಿಂದ ಬೆಳೆಗಳಿಗೆ ತಗಲುವ ಅನೇಕ ರೋಗಗಳನ್ನು ತಡೆಗಟ್ಟಬಹುದು ಎಂದರು.



ರೈತರು ತಮ್ಮ ಜಮೀನುಗಳಲ್ಲಿನ ಮಣ್ಣು ಪರೀಕ್ಷೆಯನ್ನು ಕಡ್ಡಾಯವಾಗಿ ಮಾಡಿಸಬೇಕು. ಕಾರಣ ಯಾವ ಮಣ್ಣಿನಲ್ಲಿ ಎಷ್ಟು ಸತ್ವಯುತ ಅಂಶಗಳಿವೆ ಎನ್ನುವುದು ಮಣ್ಣು ಪರೀಕ್ಷೆಯಿಂದ ತಿಳಿಯುತ್ತದೆ ಹಾಗೂ ಈ ಮಣ್ಣಿನನಲ್ಲಿ ಯಾವ ಬೆಳೆಯನ್ನು ಬೆಳೆಯಬಹುದು ಎಂಬ ನಿಖರತೆಯನ್ನು ತಿಳಿಯಲು ಸಹಾಯವಾಗುತ್ತದೆ. ಇದರಿಂದ ರೈತರಿಗೂ ಲಾಭವಾಗಲಿದೆ. ಮುಖ್ಯವಾಗಿ ಮಹಿಳೆಯರು ಕೃಷಿಯಲ್ಲಿ ಹೆಚ್ಚಿನ ಆಸಕ್ತಿಯನ್ನು ಹೊಂದಬೇಕು. ಕುಟುಂಬಕ್ಕೆ ಬೇಕಾದ ವಸ್ತುಗಳನ್ನು ಜಮೀನುಗಳಲ್ಲಿ ಬೆಳೆಯುವ ಆಸಕ್ತಿಯನ್ನು ಇಟ್ಟುಕೊಳ್ಳಬೇಕು ಎಂದು ಚೇತನಾ ಪಾಟೀಲ ತಿಳಿಸಿದರು.

ಕೃಷಿ ಸಂಪನ್ಮೂಲ ವ್ಯಕ್ತಿ ಸುರೇಶಗೌಡ ಪಾಟೀಲ ಮಾತನಾಡಿ, ರೈತರು ರಾಸಾಯನಿಕ ಗೊಬ್ಬರಗಳನ್ನು ಬಳಕೆ ಮಾಡುತ್ತಿರುವುದು ಭೂಮಿಗೆ ವಿಷ ಹಾಕಿದಂತೆ ಎನ್ನುವುದನ್ನು ಅರ್ಥ ಮಾಡಿಕೊಳ್ಳಬೇಕು. ಅತಿಯಾದ ರಾಸಾಯನಿಕ ಗೊಬ್ಬರ ಬಳಕೆಯಿಂದ ರುಚಿಕಟ್ಟಾದ ಧಾನ್ಯಗಳನ್ನು ಬೆಳೆಯಲು ಅಸಾಧ್ಯ. ಅಲ್ಲದೆ ಭೂಮಿಯ ಸತ್ವ ಕೂಡ ಬರಡಾಗುತ್ತದೆ. ಇದರಿಂದ ಮನುಷ್ಯನಿಗೂ ಅನೇಕ ರೋಗಗಳು ತಗಲಬಹುದು ಎಂದು ಎಚ್ಚರಿಸಿದ ಅವರು, ಸಾವಯವ ಗೊಬ್ಬರದತ್ತ ರೈತರು ಮುಖ ಮಾಡಬೇಕು ಎಂದರು.

ರಾಸಾಯನಿಕ ಗೊಬ್ಬರ ಬಳಕೆ ಮಾಡಿ ಬೆಳೆಯುವ ಬೆಳೆಗಳು ಬಾಳಿಕೆ ಬರುವುದಿಲ್ಲ. ಜೊತೆಗೆ ಮಾರುಕಟ್ಟೆಯಲ್ಲಿ ಬೆಲೆಯೂ ಸಿಗುವುದಿಲ್ಲ ಎಂಬ ಸತ್ಯವನ್ನು ಮೊದಲು ರೈತರು ತಿಳಿಯುವುದು ಅವಶ್ಯಕವಾಗಿದೆ. ಉತ್ತಮ ಮತ್ತು ಪೌಷ್ಠಿಕತೆಯಿರುವ ಬೆಳೆಗಳು ಬರಲು ಸಾವಯವ ಗೊಬ್ಬರದಿಂದ ಮಾತ್ರ ಸಾಧ್ಯ. ಹೀಗಾಗಿ, ತಮ್ಮ ಜಮೀನುಗಳಲ್ಲಿಯೇ ಸಿಗುವ ಕಸ ಕಡ್ಡಿಗಳಿಂದ ಗೊಬ್ಬರ ತಯಾರಿಸಿ ಬೆಳೆಗಳಿಗೆ ನೀಡಬಹುದು. ಅಗತ್ಯ ಮಾಹಿತಿ ಬೇಕಿದ್ದಲ್ಲಿ ಹುಲಕೋಟಿ ಗ್ರಾಮದಲ್ಲಿರುವ ನಮ್ಮ ಜಮೀನುಗಳನ್ನು ನೋಡಬಹುದು ಎಂದರು.

ಇದೇ ಸಂದರ್ಭದಲ್ಲಿ ಜಮೀನಿನ ಮಾಲಕರಾದ ಶಿವಯೋಗಿ ನಡುವಿನಮನಿ ಸೇರಿದಂತೆ ಕೃಷಿಕ ಸಮಾಜದ ಪ್ರತಿನಿಧಿಗಳನ್ನು ಸನ್ಮಾನಿಸಲಾಯಿತು. ಅಂದಪ್ಪ ಗಡಗಿ, ಮೇಘರಾಜ ಭಾವಿ, ಎಸ್.ಎಫ್. ತಹಸೀಲ್ದಾರ, ಪ್ರಮೋದ ಕುಲಕರ್ಣಿ ಸೇರಿದಂತೆ ಕೃಷಿಕ ಸಮಾಜದ ಪ್ರತಿನಿಧಿಗಳು ಮತ್ತು ರೈತರು ಉಪಸ್ಥಿತರಿದ್ದರು.

## ಉಚಿತ ಯೋಗಾಸನ ಕ್ರೀಡಾ ಕೋಚಿಂಗ್ ಕ್ಯಾಂಪ್

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಅಮೆಚೂರ್ ಯೋಗ ಸ್ಪೋರ್ಟ್ಸ್ ಅಸೋಸಿಯೇಶನ್ ಬೆಂಗಳೂರು ಇವರು ಜೆ.ಸಿ.ಐ ಗೋಕಾಕ ಮತ್ತು ಶ್ರೀ ಸ್ವಾಮಿ ವಿವೇಕಾನಂದ ಯೋಗ ಮತ್ತು ಸಂಸ್ಕೃತಿ ವಿಕಾಸ ಸಂಘ ಗೋಕಾಕ ಇವರ ಸಹಯೋಗದಲ್ಲಿ ಫೆಬ್ರವರಿ 1ರಂದು 4ನೇ ಕರ್ನಾಟಕ ರಾಜ್ಯ ಯೋಗಾಸನ ಸ್ಪೋರ್ಟ್ಸ್ ಲೀಗ್ ಏರ್ಪಡಿಸಿದ್ದು, ಕ್ರೀಡಾಕೂಟದಲ್ಲಿ ಗದಗ ಜಿಲ್ಲೆಯಿಂದ ಭಾಗವಹಿಸಲಿರುವ ಯೋಗಾಸನ ಕ್ರೀಡಾಪಟುಗಳಿಗಾಗಿ ಒಂದು ವಾರ ಕಾಲ ಗದಗ ಜಿಲ್ಲಾ ಅಮೆಚೂರ ಯೋಗಾಸನ ಕ್ರೀಡಾ ಸಂಸ್ಥೆಯವರು ಯೋಗಾಸನ ಕ್ರೀಡಾ ಕೋಚಿಂಗ್ ಕ್ಯಾಂಪ್ ನಡೆಸಲಿದ್ದಾರೆ.



ಯೋಗಾಸನ ಕ್ರೀಡಾ ಕೋಚಿಂಗ್ ಕ್ಯಾಂಪ್ ದಿನಾಂಕ ಜ. 25ರಿಂದ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ಪ್ರತಿದಿನ ಬೆಳಿಗ್ಗೆ 7.30ರಿಂದ 8.30ರವರೆಗೆ ಯೋಗ ಕ್ರೀಡಾಭಿಮಾನಿ ಕೆ.ಎಸ್. ಪಲ್ಲೇದ ಇವರ ಮಾರ್ಗದರ್ಶನದಲ್ಲಿ ನಡೆಯುವುದು. ಪ್ರವೇಶ ಉಚಿತವಾಗಿದ್ದು, ಭಾಗವಹಿಸಿದವರಿಗೆ ಪ್ರಮಾಣಪತ್ರ ನೀಡಲಾಗುವುದು. ಈಗಾಗಲೇ ಗೋಕಾದಲ್ಲಿ ನಡೆಯುವ ರಾಜ್ಯಮಟ್ಟದ ಯೊಗಾಸನ ಲೀಗ್‌ನಲ್ಲಿ ಭಾಗವಹಿಸಲು ಹೆಸರು ನೋಂದಾಯಿಸಿದ ಗದಗ ಜಿಲ್ಲೆಯ ಯೋಗಾಸನ ಕ್ರೀಡಾಪಟುಗಳು ಕೋಚಿಂಗ್ ಕ್ಯಾಂಪಿನಲ್ಲಿ ಭಾಗವಹಿಸಿ ಪ್ರಯೋಜನ ಪಡೆಯಬೇಕೆಂದು ಕರ್ನಾಟಕ ರಾಜ್ಯ ಅಮೆಚೂರ್ ಯೋಗ ಕ್ರೀಡಾ ಸಂಸ್ಥೆ ಅಧ್ಯಕ್ಷ ಗಣೇಶಕುಮಾರ ಪಿ.ಎನ್. ಹಾಗೂ ಕಾರ್ಯದರ್ಶಿ ನಟರಾಜ ಎ ಮತ್ತು ಶ್ರೀ ವಿವೇಕಾನಂದ ಯೋಗ ಮತ್ತು ಸಂಸ್ಕೃತಿ ಸಂಘದ ಅಧ್ಯಕ್ಷ ಆನಂದ ಸೂರಗಾವಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ–9980572709, 9448317188 ಸಂಪರ್ಕಿಸಬಹುದಾಗಿದೆ.

## ರಸ್ತೆ ಸುರಕ್ಷತಾ ನಿಯಮಗಳನ್ನು ಪಾಲಿಸಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಅಪ್ರಾಪ್ತರು ವಾಹನವನ್ನು ಚಾಲನೆ ಮಾಡಬಾರದು. ಇದನ್ನು ಉಲ್ಲಂಘಿಸಿದರೆ 25 ಸಾವಿರ ರೂ ದಂಡ ತೆರಬೇಕಾಗುತ್ತದೆ. ವಾಹನ ಚಾಲನೆ ಮಾಡುವವರು ಕಡ್ಡಾಯವಾಗಿ ವಾಹನದ ಎಲ್ಲ ದಾಖಲೆಗಳನ್ನು ಇಟ್ಟುಕೊಳ್ಳಬೇಕು. ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ ವಾಹನ ಚಾಲನೆ ಮಾಡಬೇಕು. ಪ್ರತಿ ಶಾಲೆಗಳಲ್ಲಿಯೂ ಸಹ ಈ ಬಗ್ಗೆ ಪಾಲಕರಲ್ಲಿ ಜಾಗೃತಿ ಮೂಡಿಸಲು ಶಿಕ್ಷಣ ಇಲಾಖೆಯ ಅಧಿಕಾರಿಗಳು ಮುಂದಾಗಬೇಕು. ಪ್ರತಿಯೊಬ್ಬರೂ ರಸ್ತೆ ಸುರಕ್ಷತೆಯ ನಿಯಮಗಳನ್ನು ಪಾಲಿಸಿ ಅಪಘಾತಗಳು ಸಂಭವಿಸದಂತೆ ಎಚ್ಚರವಾಗಿರಬೇಕು ಎಂದು ಸಿಜೆ ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಲಕ್ಷ್ಮೇಶ್ವರದ ನ್ಯಾಯಾಧೀಶ ಸತೀಶ ಎಂ ಹೇಳಿದರು.




ಅವರು ಶುಕ್ರವಾರ ಶಿರಹಟ್ಟಿ ಪಟ್ಟಣದಲ್ಲಿಯ ಸಾರ್ವಜನಿಕರಿಗೆ ರಸ್ತೆ ಸುರಕ್ಷತೆಯ ಬಗ್ಗೆ ಅರಿವು ಮೂಡಿಸುವ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ನಂತರ ತಾಲೂಕು ಪಂಚಾಯತ ಸಭಾಭವನದಲ್ಲಿ ಜರುಗಿದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಅಪಘಾತದ ಪ್ರಮಾಣವನ್ನು ಕಡಿಮೆ ಮಾಡುವುದು ಹಾಗೂ ರಸ್ತೆ ಸುರಕ್ಷತೆಯ ನಿಯಮಗಳನ್ನು ಪ್ರತಿಯೊಬ್ಬರೂ ಪಾಲಿಸುವುದಕ್ಕಾಗಿ ಸಾರ್ವಜನಿಕರಿಗೆ ಇಂತಹ ಜಾಗೃತಿ ಕಾರ್ಯಕ್ರಮಗಳ ಮೂಲಕ ಅರಿವು ಮೂಡಿಸುತ್ತಿದ್ದು, ಇದನ್ನು ಎಲ್ಲರೂ ಪಾಲಿಸಿ ಜೀವ ರಕ್ಷಣೆಗೆ ಆದ್ಯತೆ ನೀಡಬೇಕೆಂದು ಹೇಳಿದರು.

ಇದಕ್ಕೂ ಮುನ್ನ ತಹಸೀಲ್ದಾರ ಕಚೇರಿಯಿಂದ ಜಾಥಾ ಪ್ರಾರಂಭವಾಗಿ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ತಾಲೂಕು ಪಂಚಾಯತ ಸಭಾಭವನದವರೆಗೆ ತಲುಪಿತು.

ಈ ಸಂದರ್ಭದಲ್ಲಿ ವಿವಿಧ ಶಾಲೆಯ 400ಕ್ಕೂ ಹೆಚ್ಚು ವಿದ್ಯಾರ್ಥಿಗಳು, ಪೋಲೀಸ್ ಸಿಬ್ಬಂದಿ ಪಾಲ್ಗೊಂಡಿದ್ದರು.

ಸಿಪಿಐ ಬಿ.ವಿ. ನ್ಯಾಮಗೌಡ, ಪಿಎಸ್‌ಐ ಈರಪ್ಪ ರಿತ್ತಿ, ಉಪ ತಹಸೀಲ್ದಾರ ವಿ.ಎ. ಮುಳಗುಂದಮಠ, ಬಿಇಓ ಎಚ್.ನಾಣ್ಕಿನಾಯ್, ಸರ್ಕಾರಿ ಸಹಾಯಕ ಅಭಿಯೋಜಕಿ ಎಚ್.ಎ. ಗುಂಜಾಳ, ಎನ್.ಸಿ. ಪಾಟೀಲ, ಅರುಣ ಎಫ್.ಕಟ್ಟಿಮನಿ, ರಾಜು ನಾಯಕ ಮುಂತಾದವರು ಉಪಸ್ಥಿತರಿದ್ದರು.

## ರಾಷ್ಟ್ರೀಯ ಮತದಾರರ ಪ್ರತಿಜ್ಞಾವಿಧಿ ಸ್ವೀಕಾರ



■ವಿಜಯಸಾಕ್ಷಿ ಸುದ್ದಿ, ಗದಗ

ಹೆಸ್ಕಾಂ ಗದಗ ವಿಭಾಗದಲ್ಲಿ ರಾಷ್ಟ್ರೀಯ ಮತದಾರರ ದಿನಾಚರಣೆಯ ಅಂಗವಾಗಿ 'ನನ್ನ ಭಾರತ ನನ್ನ ಮತ' ಎಂಬ ವಿಶೇಷ ಧ್ಯೇಯವಾಕ್ಯದೊಂದಿಗೆ ಪ್ರತಿಜ್ಞಾ ವಿಧಿ ಬೋಧಿಸಲಾಯಿತು.

ಸಹಾಯಕ ಉಮೇಶ ಗದಗ ಪ್ರತಿಜ್ಞಾ ವಿಧಿ ಬೋಧಿಸಿದರು. ಕಾರ್ಯಕ್ರಮದಲ್ಲಿ ಗದಗ ವಿಭಾಗದ ಲೆಕ್ಕಾಧಿಕಾರಿಗಳಾದ ಎಸ್.ಎಚ್. ಅಮರಶೆಟ್ಟಿ, ಗ್ರಾಮೀಣ ಉಪವಿಭಾಗದ ಸ.ಕಾ.ಇಂ(ವಿ) ನಾಗರಾಜ್ ಕುರಿಯವರ, ನಗರ ಉಪವಿಭಾಗದ ಸ.ಕಾ.ಇಂ(ವಿ) ಪಿ.ಆರ್. ಹೊಸಳ್ಳಿ, ಹಾಗೂ ಸ.ಕಾ.ಇಂ(ವಿ) ಸುಜಾತಾ ಮಾಗಡಿಯವರ, ಕಾಂತೇಶ್ ತಳವಾರ, ನೌಕರರ ಸಂಘದ ಕೇಂದ್ರ ಸಮಿತಿ ಸದಸ್ಯರಾದ ಮಲ್ಲು ಯರಗೇರಿ, ಸೋಮಣ್ಣವರ, ಪಿ.ಎಂ ಬಾರಕೇರ, ಅಧ್ಯಕ್ಷರಾದ ಎಸ್.ಎಚ್. ಹುಯಿಲಗೋಳ, ಕಾರ್ಯದರ್ಶಿ ಐ.ಬಿ. ಪಾಟೀಲ, ಗುರು ಕುಂಬಾರ, ಎಂ.ಡಿ. ಮುಲ್ಲಾ ಹಾಗೂ ಸಿಬ್ಬಂದಿ ಪಾಲ್ಗೊಂಡು ಪ್ರತಿಜ್ಞಾವಿಧಿ ಸ್ವೀಕರಿಸಿದರು.

## ಸಮುದಾಯ ಆರೋಗ್ಯ ಕೇಂದ್ರದ ಉದ್ಘಾಟನೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮುಳಗುಂದ ನಾಕಾ ಹತ್ತಿರ ಅಚ್ಚುತ್ ಆಶ್ರಮ ಹಿಂದುಗಡೆ ಮಾನ್ವಿ ಲೇಔಟ್‌ನಲ್ಲಿ ಸಮುದಾಯ ಆರೋಗ್ಯ ಕೇಂದ್ರದ (ಮಾನಸಧಾರ) ಉದ್ಘಾಟನೆಯನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ ಮತ್ತು ಜಿಲ್ಲಾ ಅಸಾಂಕ್ರಾಮಿಕ ರೋಗಿಗಳ ನಿಯಂತ್ರಣ ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅನುಷ್ಠಾನ ಅಧಿಕಾರಿ ಡಾ. ರಾಜೇಂದ್ರ ಚ ಬಸರಿಗಿಡದ ನೆರವೇರಿಸಿದರು.

ಜಿಲ್ಲಾ ಜಾರಿ ಅಧಿಕಾರಿ ಡಾ. ವಾಯ್.ಕೆ. ಭಜಂತ್ರಿ, ತಾಲೂಕಾ ಆರೋಗ್ಯಾಧಿಕಾರಿ ಡಾ. ಪ್ರೀತ್ ಖೋನಾ ಪಾಲ್ಗೊಂಡಿದ್ದರು. ಸಾರಥಿ ಸಂಸ್ಥೆ ಅಧ್ಯಕ್ಷರಾದ ಎಮ್.ಬಿ. ಜಕ್ಕನಗೌಡ್ರ, ಉಪಾಧ್ಯಕ್ಷರಾದ ಎಚ್. ಎಂ. ಹಿರೇಮಠ, ಸಾರಥಿ ಸಂಸ್ಥೆ ನಿರ್ದೇಶಕ ಆರ್.ಎಚ್. ಪಾಟೀಲ್, ಸಾರಥಿ ಸಂಸ್ಥೆ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಿಬ್ಬಂದಿ ಕೇಶವ ಲಮಾಣಿ ಮುಂತಾದವರು ಹಾಜರಿದ್ದರು.

## ರಾಜ್ಯಪಾಲರ ನಡೆಯಿಂದ ಒಕ್ಕೂಟ ವ್ಯವಸ್ಥೆಗೆ ಧಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯ ವಿಧಾನಸಭೆಯ ಅಧಿವೇಶನದ ಸಂದರ್ಭದಲ್ಲಿ ರಾಜ್ಯಪಾಲರು ನಡೆದುಕೊಂಡ ರೀತಿ ಸಂವಿಧಾನ ವಿರೋಧಿಯಾಗಿದ್ದು, ಇದು ಸಮಸ್ತ ಕನ್ನಡಿಗರಿಗೆ ಮಾಡಿದ ಅವಮಾನವಾಗಿದೆ ಎಂದು ಎಂದು ಉತ್ತರ ಕರ್ನಾಟಕ ಪದವೀಧರರ ಒಕ್ಕೂಟದ ರಾಜ್ಯಾಧ್ಯಕ್ಷ ಎಂ.ಎಸ್. ನಾಗರಕಟ್ಟೆ ತೀವ್ರವಾಗಿ ಖಂಡಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಪ್ರತಿ ಸಾರ್ವತ್ರಿಕ ಚುನಾವಣೆಯ ನಂತರದ ಮೊದಲ ಅಧಿವೇಶನ ಮತ್ತು ಪ್ರತಿ ವರ್ಷದ ಮೊದಲ ಅಧಿವೇಶನದ ಆರಂಭದಲ್ಲಿ ರಾಜ್ಯಪಾಲರು ಶಾಸಕಾಂಗದ ಉಭಯ ಸದನಗಳನ್ನು ಉದ್ದೇಶಿಸಿ ಮಾತನಾಡುವುದು ಕಡ್ಡಾಯ. ಈ ಭಾಷಣವು ರಾಜ್ಯ ಸರ್ಕಾರದ ನೀತಿ, ಯೋಜನೆಗಳು ಮತ್ತು ಮುಂಬರುವ ವರ್ಷದ ಕಾರ್ಯಸೂಚಿಯನ್ನು ಒಳಗೊಂಡಿರುತ್ತದೆ. ಸಾಂವಿಧಾನಿಕ ಹೊಣೆ ಇದನ್ನು ಸಚಿವ ಸಂಪುಟವು ಸಿದ್ಧಪಡಿಸುತ್ತದೆ. ರಾಜ್ಯದ ಸಾಂವಿಧಾನಿಕ ಮುಖ್ಯಸ್ಥರಾಗಿ ಇದನ್ನು ವಾಚಿಸುವುದು ರಾಜ್ಯಪಾಲರ ಕರ್ತವ್ಯವೇ ಹೊರತು ವಿವೇಚನಾ ಅಧಿಕಾರವಲ್ಲ. ಈ ಭಾಷಣವನ್ನು ನಿರಾಕರಿಸುವುದು ಅಥವಾ ಅದರಲ್ಲಿ ವ್ಯತ್ಯಯ ಉಂಟುಮಾಡುವುದು ಪ್ರಜಾಪ್ರಭುತ್ವದ ಮೂಲಾಧಾರಕ್ಕೆ ಮಾಡುವ ದ್ರೋಹವಾಗಿದೆ.

ರಾಜ್ಯ ಸರ್ಕಾರ ರೂಪಿಸಿರುವ ಜನಪರ ಯೋಜನೆಗಳನ್ನು ಸದನದ ಮುಂದಿಡುವುದು ರಾಜಪಾಲರ ಜವಾಬ್ದಾರಿ. ಆದರೆ, ಇತ್ತೀಚಿನ ನಡವಳಿಕೆಗಳು ವೈಯಕ್ತಿಕ ಪ್ರತಿಷ್ಠೆಯಿಂದ ಕೂಡಿದ್ದು, ಜನಸಾಮಾನ್ಯರ ಬದುಕಿನ ಜೊತೆ ಚೆಲ್ಲಾಟ ಆಡುತ್ತಿವೆ ಎಂಬ ಆರೋಪ ಕೇಳಿಬಂದಿದೆ. ಇದು ಭಾರತದ ಒಕ್ಕೂಟ ವ್ಯವಸ್ಥೆಗೆ ಮತ್ತು ರಾಜ್ಯಗಳ ಸ್ವಾಯತ್ತತೆಗೆ ಮಾರಕವಾಗಿದೆ. ರಾಜ್ಯಪಾಲರ ನಡೆ ಸಾಂವಿಧಾನಿಕ ಬಿಕ್ಕಟ್ಟಿಗೆ ಕಾರಣವಾಗಬಹುದು. ಸಂಸದೀಯ ಪ್ರಜಾಪ್ರಭುತ್ವದಲ್ಲಿ ಸಚಿವ ಸಂಪುಟದ ಸಲಹೆಯೇ ಸರ್ವೋಚ್ಛವಾದುದು ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

## ಹುಬ್ಬಳ್ಳಿಯಲ್ಲಿ ಐತಿಹಾಸಿಕ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ವಸತಿ ಇಲಾಖೆ ಹಾಗೂ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯಿಂದ ಕರ್ನಾಟಕ ರಾಜ್ಯದ ಕೊಳಗೇರಿಗಳಲ್ಲಿ ವಾಸಿಸುತ್ತಿರುವ ಕುಟುಂಬಗಳಿಗೆ ಜ.24ರಂದು ಏಕಕಾಲಕ್ಕೆ 42,345 ಮನೆಗಳ ಹಂಚಿಕೆ ಹಾಗೂ ಸಾವಿರಾರು ಕುಟುಂಬಗಳಿಗೆ ಹಕ್ಕುಪತ್ರ ವಿತರಣೆಗೆ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಬೃಹತ್ ವೇದಿಕೆಯಲ್ಲಿ ಚಾಲನೆ ನೀಡುತ್ತಿದ್ದು, ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಸ್ವಾಗತಿಸಿದ್ದಾರೆ.

ವಸತಿ ಇಲಾಖೆ ಸಚಿವರಾದ ಬಿ.ಝಡ್. ಜಮೀರಅಹ್ಮದ ಖಾನ ಹಾಗೂ ಸ್ಲಂ ಬೋರ್ಡ್ ಅಧ್ಯಕ್ಷರಾದ ಪ್ರಸಾದ ಅಬ್ಬಯ್ಯ ಅವರ ಬಡವರ ಹಾಗೂ ಸ್ಲಂ ಜನರ ಪರವಾದ ಕಾಳಜಿ ಮತ್ತು ಜನಪರವಾದ ಕೆಲಸಗಳಿಗೆ ಹುಬ್ಬಳ್ಳಿಯಲ್ಲಿ ನಡೆಯುತ್ತಿರುವ ಐತಿಹಾಸಿಕ ಕಾರ್ಯಕ್ರಮವೇ ಸಾಕ್ಷಿಯಾಗಿದೆ. ಗದಗ ಜಿಲ್ಲಾ ವ್ಯಾಪ್ತಿಯಲ್ಲಿನ ಪ್ರಧಾನ ಮಂತ್ರಿಗಳ ಆವಾಸ್ ಯೋಜನಡಿಯಲ್ಲಿ



ನಿರ್ಮಾಣಗೊಂಡಿರುವ 1228 ಮನೆಗಳನ್ನು ಇದೇ ಸಂದರ್ಭದಲ್ಲಿ ಹಂಚಿಕೆ ಮಾಡಲಾಗುತ್ತಿದ್ದು, ಇದರಲ್ಲಿ ಗದಗ–ಬೆಟಗೇರಿ ನಗರದ 412, ಮುಳಗುಂದ ಪಟ್ಟಣದ 344, ನರಗುಂದದ 224, ಗಜೇಂದ್ರಗಡದ 148 ಹಾಗೂ ಲಕ್ಷ್ಮೇಶ್ವರ, ಮುಂಡರಗಿ, ಶಿರಹಟ್ಟಿ ಸೇರಿದಂತೆ 100 ಮನೆಗಳನ್ನು ಮುಖ್ಯಂತ್ರಿಗಳು ಲೋಕಾರ್ಪಣೆ ಮಾಡುತ್ತಿದ್ದಾರೆ. ಈ ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ಸ್ಲಂ ಸಮಿತಿ ನೇತೃತ್ವದಲ್ಲಿ ಗದಗ–ಬೆಟಗೇರಿ ನಗರದ ನೂರಾರು ಸ್ಲಂ ನಿವಾಸಿಗಳು ಭಾಗವಹಿಸುತ್ತಿದ್ದಾರೆ ಎಂದು ಗದಗ ಜಿಲ್ಲಾ ಸ್ಲಂ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಹಾಗೂ ಕಾರ್ಯದರ್ಶಿ ಅಶೋಕ ಕುಸಬಿ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

## ಟೆಕ್ನಾಲಜಿ ಕ್ಲಿನಿಕ್ ವಿಷಯಗಳ ಕುರಿತು ಕಾರ್ಯಾಗಾರ

■ವಿಜಯಸಾಕ್ಷಿ ಸುದ್ದಿ, ಗದಗ

ತಮ್ಮ ಉದ್ಯೋಗದಲ್ಲಿ ಸಹಕಾರಿಯಾಗುವ ಉದ್ದೇಶದಿಂದ ಗದಗ ಜಿಲ್ಲೆಯ ನೋಂದಾಯಿತ ಮೊದಲ 100 ಎಂ.ಎಸ್.ಎಂ.ಇ ಗಳಿಗೆ ಣಜಛಿಟಿಠಟಠರಥಿ ಛಿಟುಟುಛಿ ವಿಷಯಗಳ ಕುರಿತು ದಿ. 28–01–2026 ಮತ್ತು 29–01–2026 ಗಳಂದು ಎರಡು ದಿನಗಳ ಕಾರ್ಯಾಗಾರವನ್ನು ಕೇಶವ ಕ್ಲರ್ಕ್ ಇನ್ ಹೋಟೆಲ್ ಮುಳಗುಂದ ನಾಕಾ ಹತ್ತಿರ, ಗದಗನಲ್ಲಿ ಹಮ್ಮಿಕೊಳ್ಳಲು ಉದ್ದೇಶಿಸಿದೆ. ಆಸಕ್ತ ಉದ್ದಿಮೆದಾರರು, ಈ ಕೆಳಗಿನ ಲಿಂಕ್ ಮೂಲಕ ದಿನಾಂಕ: 27–01–2026 ರ ಸಾಯಂಕಾಲ 5:00 ಗಂಟೆಯೊಳಗೆ ನೋಂದಾಯಿಸಲು ತಿಳಿಸಿದೆ.

ಲಿಂಕ್ : https://docs.google.com/spreadsheets/d/1HygiS6VeTkiuk-LMZ-84wGt7olYzkfnKCXJ1IozCFss/edit?usp=sharing

ಹೆಚ್ಚಿನ ವಿವರಗಳಿಗೆ ಜಂಟಿ ನಿರ್ದೇಶಕರ ಕಚೇರಿ, ಜಿಲ್ಲಾ ಕೈಗಾರಿಕಾ ಕೇಂದ್ರ, ಗದಗ ದೂರವಾಣಿ ಸಂ: 08372–231398/9886254698 ಹಾಗೂ ಇ–ಮೇಲ್ ವಿಳಾಸ jddicgadag@gmail.com ಸಂಪರ್ಕಿಸಬಹುದಾಗಿದೆ. ಕೇವಲ ಜಿಲ್ಲೆಯ 100 ಉದ್ದಿಮೆಗಳಿಗೆ ಅವಕಾಶವಿದ್ದು, ಕೂಡಲೇ ನೋಂದಾಯಿಸಿಕೊಳ್ಳಲು ತಿಳಿಸಿದೆ ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka